ವಿಜಯಪುರ | ಸಂಪುಟ 04 | ಸಂಚಿಕೆ 165 | ಪುಟ 04 | ₹ 3.00

https://udayarashminews.com

udayarashmi 90088 88340

# ಉದಯ ರಶ್ಮಿ

Udayarashmi Kannada Daily

ಜನಪರ-ಜೀವಪರ

ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ

Editor: Indushekhar Manur

editor.udayarashmi@gmail.com RNI NO: KARKAN/2023/86203 ಶನಿವಾರ, ಆಗಸ್ಟ್, 22, 2026

"ಸಚಿವ ಬಿ.ನಾಗೇಂದ್ರ ವಿರುದ್ಧ ಯಾವುದೇ ಪ್ರಕರಣ ಇಲ್ಲ ಎಂದು ಹೇಳುವ ಮೂಲಕ ಉಪಮುಖ್ಯಮಂತ್ರಿ ಸದನವನ್ನು ದಾರಿ ತಪ್ಪಿಸಿದ್ದಾರೆ. ಒಟ್ಟು 31 ಪ್ರಕರಣಗಳ ಪೈಕಿ ಮೂರು ಪ್ರಕರಣಗಳಲ್ಲಿ ಸಿಬಿಐ ನಾಗೇಂದ್ರ ವಿರುದ್ಧ ಆರೋಪಪಟ್ಟಿ ಸಲ್ಲಿಸಿದೆ. ಈ ಮೂರು ಪ್ರಕರಣಗಳಲ್ಲೂ ಅವರು ಪ್ರಮುಖ ಆರೋಪಿಯಾಗಿದ್ದಾರೆ."



■ ಆರ್. ಅಶೋಕ
ವಿಧಾನಸಭೆ ವಿಪಕ್ಷ ನಾಯಕರು

# ಆಲಮಟ್ಟಿ ಜಲಾಶಯ ಸುರಕ್ಷಿತ, ಗುಣಮಟ್ಟ ಉತ್ತಮ: ಪ್ರೊ. ಜೋಷಿ



■ ಉದಯರಶ್ಮಿ ದಿನಪತ್ರಿಕೆ

ಆಲಮಟ್ಟಿ: ಆಣೆಕಟ್ಟು ಸುರಕ್ಷತಾ ಕಾಯ್ದೆ-2021ರ ಅನ್ವಯ ಪ್ರೊ.ಶರದ್ ಜೋಷಿ ನೇತೃತ್ವದ 8 ಜನರ ನೀರಾವರಿ ತಜ್ಞರ ತಂಡವು ಬುಧವಾರ ಮತ್ತು ಗುರುವಾರ ಎರಡು ದಿನಗಳ ಕಾಲ ಆಲಮಟ್ಟಿ ಜಲಾಶಯದ ಸಮಗ್ರ ಸುರಕ್ಷತಾ ಪರಿಶೀಲನೆ ನಡೆಸಿದೆ.

ತಜ್ಞರು ಜಲಾಶಯದ ಬಾಳಿಕೆ ಮತ್ತು ನೀರಿನ ಸೋರಿಕೆ, ಭೂಕಂಪ ನಿರೋಧಕ ಸಾಮರ್ಥ್ಯ, ಗೇಟ್‌ಗಳ ಕಾರ್ಯಕ್ಷಮತೆ, ಸಿವಿಲ್ ಕಾಮಗಾರಿಗಳು ಮತ್ತು ಕಾಫರ್ ಜಲಾಶಯಗಳ ಗುಣಮಟ್ಟ ಈ ಅಂಶಗಳನ್ನು ಪರಿಶೀಲಿಸಿದರು.

ತಜ್ಞರ ಅಭಿಪ್ರಾಯ

ತಂಡದ ನೇತೃತ್ವ ವಹಿಸಿದ್ದ ಪ್ರೊ. ಶರದ್ ಜೋಷಿ ಮಾತನಾಡಿ, "ಜಲಾಶಯದ ಗುಣಮಟ್ಟ ಉತ್ತಮವಾಗಿದೆ. ಸುರಕ್ಷತೆ ಮತ್ತು ಸಾಮರ್ಥ್ಯವನ್ನು ಇನ್ನಷ್ಟು ಹೆಚ್ಚಿಸಲು ಕೈಗೊಳ್ಳಬಹುದಾದ ಕ್ರಮಗಳ ಬಗ್ಗೆಯೂ ಪರಿಶೀಲಿಸಿದ್ದೇವೆ" ಎಂದು ತಿಳಿಸಿದರು.

ತಜ್ಞರು ಪ್ರತ್ಯೇಕ ವರದಿಗಳನ್ನು ಸಲ್ಲಿಸಿದ ಬಳಿಕ ಅವುಗಳನ್ನು ಕ್ರೋಢೀಕರಿಸಿ ಡಿಸೆಂಬರ್ 2026ರೊಳಗೆ ರಾಜ್ಯ ಸರ್ಕಾರಕ್ಕೆ ಸಮಗ್ರ ಮೌಲ್ಯಮಾಪನ ವರದಿ ಸಲ್ಲಿಸಲಾಗುವುದು. ಅಗತ್ಯವಿರುವ ತುರ್ತು ಕ್ರಮಗಳನ್ನೂ ಶಿಫಾರಸು ಮಾಡಲಾಗುವುದು ಎಂದು ಹೇಳಿದರು.

ಸಮಿತಿ ಸದಸ್ಯರಾದ ಶಿವಪ್ರಸಾದ, ಎಸ್.ಎಲ್. ರಾಜಶೇಖರ, ಕೆ. ಸತ್ಯನಾರಾಯಣ, ಅಮರನಾಥ ಹೆಗಡೆ, ಕಮಲಶೇಖರನ್, ಪ್ರಾಣೇಶ ಮುರನಾಳ, ಎಸ್. ರಂಗರಾಮ, ಮುಖ್ಯ ಎಂಜಿನಿಯರ್ ಡಿ. ಬಸವರಾಜ, ಬಿ.ಎಸ್. ಪಾಟೀಲ, ಕೊಳ್ಳಿ, ವಿಠ್ಠಲ ಜಾಧವ, ರವಿ ಚಂದ್ರಗಿರಿ ಸೇರಿದಂತೆ ಅಧಿಕಾರಿಗಳು ಇದ್ದರು.

**ರಾಜ್ಯದ 231 ಅಣೆಕಟ್ಟುಗಳ ಪರಿಶೀಲನೆ**

**ರಾಜ್ಯದಲ್ಲಿರುವ ಒಟ್ಟು 231 ಅಣೆಕಟ್ಟುಗಳ ಸುರಕ್ಷತಾ ಪರಿಶೀಲನೆಗೆ 16 ತಂಡಗಳನ್ನು ರಚಿಸಲಾಗಿದೆ. ಪರಿಶೀಲನೆ ಬಳಿಕ ಜಲಾಶಯಗಳನ್ನು ಸಂಪೂರ್ಣ, ಭಾಗಶಃ ಮತ್ತು ಅಲ್ಪ ಪ್ರಮಾಣದ ದುರಸ್ತಿ ಅಗತ್ಯವಿರುವ ಮೂರು ವರ್ಗಗಳಲ್ಲಿ ವಿಂಗಡಿಸಲಾಗುವುದು.**

**ಪ್ರೊ. ಜೋಷಿ ಅವರು "ಜಲಾಶಯಗಳಿಂದಲೇ ಭೂಕಂಪ ಸಂಭವಿಸುತ್ತದೆ ಎಂಬುದು ತಪ್ಪು ಕಲ್ಪನೆ" ಎಂದು ಸ್ಪಷ್ಟಪಡಿಸಿದರು. ಹಾಗೂ "ನದಿ ಪಾತ್ರಗಳ ಒತ್ತುವರಿ ತೆರವು ಅಗತ್ಯ" ಎಂದು ಹೇಳಿದರು.**

# ಬಿಜೆಪಿ ವಿರುದ್ಧ ಕಾಂಗ್ರೆಸ್ ಶಾಸಕರ ಪ್ರತಿಭಟನೆ

## ವಿಧಾನಸಭೆ ಆವರಣದ ಮಹಾತ್ಮ ಗಾಂಧಿ ಪ್ರತಿಮೆ ಮುಂದೆ ಪ್ರತಿಭಟನೆ | ವಿಧಾನಮಂಡಲ ಅಧಿವೇಶನಕ್ಕೆ ಬಿಜೆಪಿ - ಜೆಡಿಎಸ್ ಅಡ್ಡಿ ಆರೋಪ

ಬೆಂಗಳೂರು: ರಾಜ್ಯ ವಿಧಾನಮಂಡಲದ ಎರಡೂ ಸದನಗಳನ್ನು ಬಿಜೆಪಿ ಮತ್ತು ಜೆಡಿಎಸ್ ಸದಸ್ಯರು ಕಾರ್ಯ ನಿರ್ವಹಿಸದಂತೆ ತಡೆಯುತ್ತಿದ್ದಾರೆ ಎಂದು ಆರೋಪಿಸಿ ಕಾಂಗ್ರೆಸ್ ಶಾಸಕರು ಶುಕ್ರವಾರ ವಿಧಾನಸಭೆ ಆವರಣದಲ್ಲಿರುವ ಮಹಾತ್ಮ ಗಾಂಧಿ ಪ್ರತಿಮೆಯ ಮುಂದೆ ಪ್ರತಿಭಟನೆ ನಡೆಸಿದರು.





ಕರ್ನಾಟಕ ರಾಜ್ಯ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದಲ್ಲಿ 89 ಕೋಟಿ ರೂ.ಗಳ ದುರುಪಯೋಗ ನಡೆದಿದ್ದು, ಇದರಲ್ಲಿ ಯೋಜನೆ ಮತ್ತು ಸಾಂಖ್ಯಿಕ ಸಚಿವ ಬಿ. ನಾಗೇಂದ್ರ ಅವರ ಪಾತ್ರವಿದೆ ಎಂದು ಆರೋಪಿಸಿರುವ ಬಿಜೆಪಿ-ಜೆಡಿಎಸ್ ಸಚಿವರನ್ನು ಸಂಪುಟದಿಂದ ವಜಾಗೊಳಿಸಬೇಕೆಂದು ಒತ್ತಾಯಿಸಿ ವಿಧಾನಸಭೆ ಮತ್ತು ವಿಧಾನ ಪರಿಷತ್ತಿನೊಳಗೆ ಪ್ರತಿಭಟನೆ ನಡೆಸುತ್ತಿವೆ.

ಸಚಿವರಾದ ಶರಣ್ ಪ್ರಕಾಶ್ ಪಾಟೀಲ್, ಬಿ. ನಾಗೇಂದ್ರ, ಕಾಂಗ್ರೆಸ್ ರಾಜ್ಯಾಧ್ಯಕ್ಷ ಬಿ. ಕೆ. ಹರಿಪ್ರಸಾದ್ ಮತ್ತು ಇತರ ಶಾಸಕರು ಪ್ರತಿಭಟನೆಯಲ್ಲಿ ಭಾಗವಹಿಸಿ ವಿಧಾನಮಂಡಲವನ್ನು ಕಾರ್ಯರೂಪಕ್ಕೆ ತರಲು ಅವಕಾಶ ನೀಡಬೇಕೆಂದು ಒತ್ತಾಯಿಸಿ ಘೋಷಣೆಗಳನ್ನು ಕೂಗಿದರು.

ವಿಧಾನಸಭೆಯಲ್ಲಿ ಉಂಟಾದ ಗದ್ದಲದಿಂದಾಗಿ ತುರ್ತು ಮತ್ತು ಜ್ವಲಂತ ಸಮಸ್ಯೆಗಳ ಕುರಿತು ಚರ್ಚಿಸಲು ಸಾಧ್ಯವಾಗುತ್ತಿಲ್ಲ ಎಂದು ಕಾಂಗ್ರೆಸ್ ಶಾಸಕರು ಹೇಳಿದರು ಮತ್ತು ಬಿಜೆಪಿ ಮತ್ತು ಜೆಡಿಎಸ್ ಶಾಸಕಾಂಗ ಕಲಾಪಗಳಿಗೆ ಅಡ್ಡಿಪಡಿಸುತ್ತಿವೆ ಎಂದು ಆರೋಪಿಸಿದರು.

"ಸದನ ನಡೆಸಿ, ಸಂವಿಧಾನವನ್ನು ಉಳಿಸಿ" ಎಂದು ಕಾಂಗ್ರೆಸ್ ನಾಯಕರು ವಿರೋಧ ಪಕ್ಷಗಳ ವಿರುದ್ಧ ಘೋಷಣೆ ಕೂಗಿದ್ದಾರೆ.

ಕರ್ನಾಟಕ ಮಹರ್ಷಿ ವಾಲ್ಮೀಕಿ ಎಸ್‌ಟಿ ಅಭಿವೃದ್ಧಿ ನಿಗಮದಿಂದ ಹಣವನ್ನು ದುರುಪಯೋಗಪಡಿಸಿಕೊಂಡ ಆರೋಪದ ನಂತರ ಹಿಂದಿನ ಸಿದ್ದರಾಮಯ್ಯ ನೇತೃತ್ವದ ಸಚಿವ ಸಂಪುಟದಲ್ಲಿ ಬುಡಕಟ್ಟು ಕಲ್ಯಾಣ ಸಚಿವರಾಗಿದ್ದ ನಾಗೇಂದ್ರ ರಾಜೀನಾಮೆ ನೀಡಿದ್ದರು. ಆದರೆ ಅವರನ್ನು ಆಗಸ್ಟ್ 3 ರಂದು ಶಿವಕುಮಾರ್ ನೇತೃತ್ವದ ಸಚಿವ ಸಂಪುಟಕ್ಕೆ ಸೇರಿಸಲಾಯಿತು.

**ಇಡಿ ಆರೋಪ ಪಟ್ಟಿಯಲ್ಲಿ ನಾಗೇಂದ್ರ ಹೆಸರು**

**2024 ರ ಜುಲೈನಲ್ಲಿ ವಾಲ್ಮೀಕಿ ನಿಗಮ ಹಗರಣಕ್ಕೆ ಸಂಬಂಧಿಸಿದಂತೆ ಜಾರಿ ನಿರ್ದೇಶನಾಲಯ ಬಳ್ಳಾರಿ ಶಾಸಕರನ್ನು ಬಂಧಿಸಿತ್ತು ಮತ್ತು ಅದೇ ವರ್ಷ ಅಕ್ಟೋಬರ್‌ನಲ್ಲಿ ಬೆಂಗಳೂರಿನ ವಿಶೇಷ ನ್ಯಾಯಾಲಯ ಅವರಿಗೆ ಜಾಮೀನು ನೀಡಿತು. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಇಡಿ ಮತ್ತು ಸಿಬಿಐ ಸಲ್ಲಿಸಿದ ಆರೋಪ ಪಟ್ಟಿಯಲ್ಲಿ ನಾಗೇಂದ್ರ ಅವರ ಹೆಸರಿದೆ.**

# ಕಾಮಗಾರಿ ಸ್ಥಳದಲ್ಲಿ ಕೂಲಿಕಾರ್ಮಿಕರಿಗೆ ಮೂಲಸೌಕರ್ಯ ಕಲ್ಪಿಸಿ

## ವಿಬಿ-ಜಿ ರಾಮ್ ಜಿ ಕಾಮಗಾರಿ ಸ್ಥಳಗಳಿಗೆ ಭೇಟಿ ನೀಡಿ ಪರಿಶೀಲಿಸಿದ ಜಿಪಂ ಉಪ ಕಾರ್ಯದರ್ಶಿ ಪ್ರಕಾಶ ವಡ್ಡರ ಅಧಿಕಾರಿಗಳಿಗೆ ಸೂಚನೆ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಗ್ರಾಮೀಣ ಭಾಗದ ಕೂಲಿಕಾರರಿಗೆ ನಿರಂತರ ಉದ್ಯೋಗ ಒದಗಿಸುವುದು ಹಾಗೂ ಕಾಮಗಾರಿಗಳಲ್ಲಿ ಗುಣಮಟ್ಟ ಕಾಯ್ದುಕೊಳ್ಳುವಂತೆ ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಪ್ರಕಾಶ ವಡ್ಡರ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಬಬಲೇಶ್ವರ ತಾಲೂಕಿನ ಸಾರವಾಡ ಗ್ರಾಮ ಪಂಚಾಯತಿ ವ್ಯಾಪ್ತಿಯ ಕಣಮುಚನಾಳ ಹಾಗೂ ಜುಮನಾಳ ಗ್ರಾಮ ಪಂಚಾಯತಿ ವ್ಯಾಪ್ತಿಯ ಖತಿಜಾಪೂರ ಗ್ರಾಮಗಳಲ್ಲಿ ನಡೆಯುತ್ತಿರುವ ಕಾಲುವೆ ಹಾಗೂ ನಾಲಾ ಪುನಶ್ಚೇತನ ಕಾಮಗಾರಿ ಸ್ಥಳಗಳಿಗೆ ಅವರು ಶುಕ್ರವಾರ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಕೆಲಸದ ಸ್ಥಳದಲ್ಲಿ ಕೂಲಿಕಾರ್ಮಿಕ-ರಿಗೆ ನೆರಳಿನ ವ್ಯವಸ್ಥೆ, ಕುಡಿಯುವ ನೀರು ಹಾಗೂ ಪ್ರಥಮ ಚಿಕಿತ್ಸಾ ವ್ಯವಸ್ಥೆ ಕಡ್ಡಾಯವಾಗಿ ಒದಗಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಪರಿಶೀಲನೆ ವೇಳೆ ತಾಲೂಕು ಪಂಚಾಯಿತಿ ಇಒ ಜೆ.ಎಸ್. ಪಠಾಣ್, ಸಹಾಯಕ ನಿರ್ದೇಶಕ ವಿ.ಎಸ್. ಹಿರೇಮಠ, ಪಿಡಿಒ ಪವಿತ್ರಾ ನೀಲಕೇಣಿ,



ತಾಂತ್ರಿಕ ಸಂಯೋಜಕ ಮಹೇಶ್ ಇಂಗಳೇಶ್ವರ, ಐಇಸಿ ಸಂಯೋಜಕರಾದ ಶಾಂತಪ್ಪ ಇಂಡಿ, ಮುತ್ತುರಾಜ್ ಸಿಂಗೆ ಸೇ-ರಿದಂತೆ ಇತರ ಸಿಬ್ಬಂದಿ ಉಪಸ್ಥಿತರಿದ್ದರು.

# ಆ.23ರಂದು ಸಂಗೊಳ್ಳಿ ರಾಯಣ್ಣ ಜಯಂತಿ & ಪ್ರತಿಭಾ ಪುರಸ್ಕಾರ

■ ಉದಯರಶ್ಮಿ ದಿನಪತ್ರಿಕೆ

ಸಿಂದಗಿ: ತಾಲೂಕಾ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ನೌಕರರ ಸಂಘದ ವತಿಯಿಂದ ಆ.23ರಂದು ನಗರದ ಗುಂದಗಿ ಫಂಕ್ಷನ್ ಹಾಲ್‌ನಲ್ಲಿ ಬೆಳಿಗ್ಗೆ 11ಗಂಟೆಗೆ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಜಯಂತಿ ಹಾಗೂ ಪ್ರತಿಭಾ ಪುರಸ್ಕಾರ ಸಮಾರಂಭ ಹಮ್ಮಿಕೊಳ್ಳಲಾಗಿದೆ ಎಂದು ಸಂಗೊಳ್ಳಿ ರಾಯಣ್ಣ ನೌಕರರ ಸಂಘದ ಅಧ್ಯಕ್ಷ ರಾಯಪ್ಪ ಇವಣಗಿ ತಿಳಿಸಿದರು.



ಸಿಂದಗಿ ನಗರದ ಪ್ರವಾಸಿ ಮಂದಿರದಲ್ಲಿ ನಡೆದ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ಅವರು, ಕಾರ್ಯಕ್ರಮದ ಸಾನಿಧ್ಯವನ್ನು ಹಲವು ಪೂಜ್ಯರು ವಹಿಸಲಿದ್ದಾರೆ. ನಗರಾಭಿವೃದ್ಧಿ ಸಚಿವ ಡಾ.ಯತೀಂದ್ರ ಸಿದ್ದರಾಮಯ್ಯ ಉದ್ಘಾಟಿಸಲಿದ್ದು, ಶಾಸಕ ಅಶೋಕ ಮನಗೂಳಿ ಜ್ಯೋತಿ ಬೆಳಗಿಸಲಿದ್ದಾರೆ. ಮಾಜಿ ಉಪಮುಖ್ಯಮಂತ್ರಿ ಕೆ.ಎಸ್.ಈಶ್ವರಪ್ಪ ಹಾಗೂ ಮಾಜಿ ಸಚಿವ ಬಂಡೆಪ್ಪ ಖಾಶಂಪೂರ ಅವರು ಭಾವಚಿತ್ರಕ್ಕೆ ಪೂಜೆ ನೆರವೇರಿಸಲಿದ್ದಾರೆ. ಮಾಜಿ ಸಚಿವ ವರ್ತೂರ ಪ್ರಕಾಶ ಹಾಗೂ ಮಾಜಿ ಶಾಸಕರಾದ ಶರಣಪ್ಪ ಸುಣಗಾರ, ರಮೇಶ ಭೂಸನೂರ ಸೇರಿದಂತೆ ಅನೇಕರು ಅತಿಥಿಗಳಾಗಿ ಆಗಮಿಸಲಿದ್ದಾರೆ ಎಂದರು.

ಈ ವೇಳೆ ಸಮಾಜದ ಮುಖಂಡ ಮಲ್ಲಿಕಾರ್ಜುನ ಸಾವಳಸಂಗ ಮಾತನಾಡಿ, ಕಾರ್ಯಕ್ರಮದಲ್ಲಿ ಜಿಲ್ಲೆಯ ಸಮಾಜ ಬಾಂಧವರು, ಸಂಗೊಳ್ಳಿ ರಾಯಣ್ಣನವರ ಅಭಿಮಾನಿಗಳು ಹಾಗೂ ಅನುಯಾಯಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಮನವಿ ಮಾಡಿದರು.

ಪತ್ರಿಕಾಗೋಷ್ಠಿಯಲ್ಲಿ ಪ್ರಾಚಾರ್ಯ ಎ.ಆರ್. ಹೆಗ್ಗಣದೊಡ್ಡಿ, ವಕೀಲರಾದ ಎಸ್.ಕೆ.ಪೂಜಾರಿ, ನಾಗಪ್ಪ ಶಿವೂರ, ಆರ್.ಕೆ.ಪಾಟೀಲ, ಎಲ್.ಎಸ್.ಪರಮಾನಂದ, ಎ.ವೈ.ತಳಕೇರಿ, ಎಸ್.ಎಲ್.ಸುಂಬಡ, ಎಚ್.ಬಿ.ಪೂಪೂರಿ, ಸಿದ್ದು ಬುಳ್ಳಾ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# 4 ದಿನ ಪೂರೈಸಿದ ಬಿಜೆಪಿ ಧರಣಿ ಸತ್ಯಾಗ್ರಹ ಅಂತ್ಯ



■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಸಚಿವ ಬಿ.ನಾಗೇಂದ್ರ ರಾಜೀನಾಮೆ ಹಾಗೂ ವಿವಿಧ ಬೇಡಿಕೆಗಳಿಗೆ ಆಗ್ರಹಿಸಿ ಬಿಜೆಪಿ ಸಿಂದಗಿ ಮತಕ್ಷೇತ್ರದ ಮಂಡಲದ ವತಿಯಿಂದ ನಗರದಲ್ಲಿ ನಡೆಯುತ್ತಿರುವ ಬೃಹತ್ ಧರಣಿ ಸತ್ಯಾಗ್ರಹ 4ನೇ ದಿನಕ್ಕೆ ಕಾಲಿಟ್ಟಿದೆ.

ಬಿಜೆಪಿ ಕಾರ್ಯಕರ್ತರು ಕೆಲ ಘಂಟೆಗಳ ಕಾಲ ರಸ್ತೆ ತಡೆದು ಪ್ರತಿಭಟನೆ ನಡೆಸಿದರು.

ಧರಣಿ ನಿರತ ಸ್ಥಳಕ್ಕೆ ಜಿಲ್ಲಾಧಿಕಾರಿ ಆನಂದ ಕೆ ಅವರು ಆಗಮಿಸಿ ಮನವಿ ಪತ್ರ ಸ್ವೀಕರಿಸಿದರು.

ಧರಣಿ ಸತ್ಯಾಗ್ರಹದ ನೇತೃತ್ವವನ್ನು ಸಂಸದ ರಮೇಶ ಜಿಗಜಿಣಗಿ ವಹಿಸಿ ಮಾತನಾಡಿ, ತಾನು ಎಸ್‌ಟಿ ಎಂಬ ಕಾರಣಕ್ಕೆ ಬಿಜೆಪಿಗರು ಹೋರಾಟ ಮಾಡುತ್ತಿದ್ದಾರೆಂದು ಆರೋಪಿಸುವ ಸಚಿವ ನಾಗೇಂದ್ರನಿಗೆ ಅದೇ ಸಮುದಾಯದ ಅನುದಾನ ದುರ್ಬಳಕೆ ಮಾಡಿಕೊಳ್ಳುವಾಗ ಕಾಳಜಿ ಇರಲಿಲ್ಲವೇ? ಹಾಗೆ ನೋಡಿದರೆ ಬಿಜೆಪಿಯೇ ಎಸ್‌ಟಿ ಸಮುದಾಯದ ಕಾಳಜಿ ಮೆರೆಯುತ್ತಿದೆ ಎಂದರು.

ನಗರದ ಡಾ.ಬಿ.ಆರ್. ಅಂಬೇಡ್ಕರ್ ವೃತ್ತದಲ್ಲಿ ನಾಗೇಂದ್ರನಿಗೆ ಸಂಪುಟದಿಂದ ಕೈ ಬಿಡಲು ಹಾಗೂ ಬರ ಪರಿಹಾರ ಘೋಷಿಸಲು' ಆಗ್ರಹಿಸಿ ಬಿಜೆಪಿಯಿಂದ ಹಮ್ಮಿಕೊಂಡಿದ್ದ ಅನಿರ್ದಿಷ್ಟಾವಧಿ ಧರಣಿಯನ್ನು ಶುಕ್ರವಾರ ಮುಕ್ತಾಯಗೊಳಿಸಿ ಅವರು ಮಾತನಾಡಿದರು.

ವಿಧಾನ ಮಂಡಲ ಅಧಿವೇಶನದಲ್ಲಿ ಬರ ಪರಿಹಾರಕ್ಕೆ ಸಂಬಂಧಿಸಿದಂತೆ ಚರ್ಚೆಯಾಗದ ಕಾರಣ ಹೋರಾಟ ಕೈಬಿಟ್ಟು ಬರದ ಕುರಿತು ಚರ್ಚಿಸಲು ರಾಜ್ಯ ನಾಯಕರು ತೀರ್ಮಾನ ಕೈಗೊಂಡಿದ್ದಾರೆ. ತನ್ನಿಮಿತ್ತ ಹೋರಾಟ ಕೈಬಿಡಲಾಗುತ್ತಿದೆ ಎಂದು ಸಂಸದರು ಹೇಳಿದರು.

ಈ ಸಂದರ್ಭದಲ್ಲಿ ಮಾಜಿ ಶಾಸಕ ರಮೇಶ ಭೂಸನೂರ ಮಾತನಾಡಿ, ಪರಿಶಿಷ್ಟ ಪಂಗಡಕ್ಕೆ ಸೇರಿದ ವಾಲ್ಮೀಕಿ ಜನಾಂಗದ ಸರ್ವತೋಮುಖ ಅಭಿವೃದ್ಧಿಗೆ ಬಳಕೆ ಆಗಬೇಕಿದ್ದ ಹಣ ಲೂಟಿ ಮಾಡಲಾಗಿದೆ. ಸಚಿವ ನಾಗೇಂದ್ರ ಅವರು ಸಂವಿಧಾನದ ಮೌಲ್ಯಗಳಿಗೆ ಅಪಚಾರ ಎಸಗಿದ್ದಾರೆ ಎಂದರು.

ಜಿಲ್ಲಾಧ್ಯಕ್ಷರಾದ ಗುರಲಿಂಗಪ್ಪ ಅಂಗಡಿ ಮಾತನಾಡಿ, ವಿಜಯಪುರ ಜಿಲ್ಲೆಯಲ್ಲಿ ಮಳೆ ಕೊರತೆಯಿಂದ ಕೃಷಿ ಚಟುವಟಿಕೆಗಳು ತೀವ್ರವಾಗಿ ಹಿನ್ನಡೆಯಾಗಿದ್ದು, ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಹಲವೆಡೆ ಬಿತ್ತನೆ ಮಾಡಿದ ಬೆಳೆಗಳು ಮಳೆಯಿಲ್ಲದೆ ಒಣಗುವ ಪರಿಸ್ಥಿತಿ ನಿರ್ಮಾಣವಾಗಿದೆ. ಜಾನುವಾರುಗಳಿಗೆ ಮೇವು ಮತ್ತು ಕುಡಿಯುವ ನೀರಿನ ಸಮಸ್ಯೆಯೂ ಎದುರಾಗುವ ಆತಂಕ ಹೆಚ್ಚಾಗಿದೆ. ಈ ಹಿನ್ನೆಲೆಯಲ್ಲಿ ವಿಜಯಪುರ ಜಿಲ್ಲೆಯನ್ನು ತಕ್ಷಣ ಬರಪೀಡಿತ ಜಿಲ್ಲೆ ಎಂದು ಘೋಷಿಸಿ, ರೈತರಿಗೆ ಬೆಳೆ ನಷ್ಟ ಪರಿಹಾರ, ಬೆಳೆ ವಿಮೆ ಸೌಲಭ್ಯ, ಸಾಲ ಮರುಪಾವತಿಗೆ ಪರಿಹಾರಾತ್ಮಕ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಸಿಂದಗಿ ಮಂಡಳ ಅಧ್ಯಕ್ಷ ಸಂತೋಷ ಪಾಟೀಲ ಡಂಬಳ, ಉಮೇಶ ಕಾರಜೋಳ, ವಿವೇಕಾನಂದ ಡಬ್ಬಿ, ಸಂಜೀವ ಐಹೊಳ್ಳಿ, ಗೋಪಾಲ ಘಟಕಾಂಬಳೆ, ಈರಣ್ಣ ರಾವೂರ, ಮಳುಗೌಡ ಪಾಟೀಲ, ಸ್ವಪ್ನಾ ಕಣಮುಚ್ಚನಾಳ, ಸಾಬು ಮಾಶ್ಯಾಳ, ವಿಜಯ ಜೋಶಿ, ಸಿದ್ರಾಮ ಅನಗೊಂಡ, ಶಿಲ್ಪಾ ಕುದರಗೊಂಡ, ಶ್ರೀಶೈಲಗೌಡ ಬಿರಾದಾರ, ಅಶೋಕ ಅಲ್ಲಾಪೂರ, ಮಲ್ಲಿಕಾರ್ಜುನ ಜೋಗುರ ಸೇರಿದಂತೆ ಪಕ್ಷದ ಕಾರ್ಯಕರ್ತರು ಉಪಸ್ಥಿತರಿದ್ದರು.

# ಅಂತಿಮ ಹಂತ ತಲುಪಿದ ವಿಜಯಪುರ ವಿಮಾನ ನಿಲ್ದಾಣ ಕಾಮಗಾರಿ

## 2027 ರ ಜನವರಿ ಅಂತ್ಯದವರೆಗೆ ವಿಮಾನ ಹಾರಾಟ | ಕೆಎಸ್‌ಐಐಡಿಸಿ ಅಧ್ಯಕ್ಷ ಎಸ್.ಜಿ. ನಂಜಯ್ಯನಮಠ ಹೇಳಿಕೆ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಬಹುನಿರೀಕ್ಷಿತ ವಿಜಯಪುರ ವಿಮಾನ ನಿಲ್ದಾಣ ಕಾರ್ಯಾರಂಭಕ್ಕೆ ಮುಹೂರ್ತ ಕೂಡಿ ಬಂದಿದ್ದು, 2027ರ ವರ್ಷಾರಂಭವಾಗುತ್ತಿದ್ದಂತೆಯೇ ವಿಮಾನ ಹಾರಿಸುವ ಪ್ರಯತ್ನ ಕೈಗೂಡಲಿದೆ ಎಂದು ಕರ್ನಾಟಕ ರಾಜ್ಯ ಕೈಗಾರಿಕಾ ಮತ್ತು ಮೂಲಸೌಲಭ್ಯ ಅಭಿವೃದ್ಧಿ ನಿಗಮದ (ಕೆಎಸ್‌ಐಐಡಿಸಿ) ಅಧ್ಯಕ್ಷ ಎಸ್.ಜಿ. ನಂ-ಜಯ್ಯನಮಠ ತಿಳಿಸಿದರು.

ಶುಕ್ರವಾರ ವಿಮಾನ ನಿಲ್ದಾಣಕ್ಕೆ ಭೇಟಿ ನೀಡಿ ಪ್ರಗತಿ ಪರಿಶೀಲಿಸಿದ ಬಳಿಕ ಅವರು ನಗರದ ಪ್ರವಾಸಿ ಮಂದಿರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದರು.

ಪರಿಸರ ಇಲಾಖೆಯ ಅನುಮತಿ ಇಲ್ಲದೇ ಇರುವುದರಿಂದ ಹಾಗೂ ಸುಪ್ರೀಂ ಕೋರ್ಟ್ ತಡೆಯಾಜ್ಞೆ ನೀಡಿದ್ದರಿಂದಾಗಿ ವಿಳಂಬವಾಗಿದೆ.

ನಂತರದಲ್ಲಿ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಜಿಲ್ಲಾ ಮೂಲಸೌಕರ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಂ.ಬಿ.ಪಾಟೀಲರು ಈ ನಿಟ್ಟಿನಲ್ಲಿ ಸಾಕಷ್ಟು ಪ್ರಯತ್ನಿಸಿದ್ದ-ರಿಂದ ಇದೀಗ ಮೂರು ವಾರಗಳ ಹಿಂದೆ ತಡೆಯಾಜ್ಞೆ ತೆರವಾಗಿದೆ ಎಂದರು.

ಜೊತೆಗೆ ಕೇಂದ್ರ ಪರಿಸರ ಇಲಾಖೆ ಅನುಮತಿ ಕೋರಿದ್ದೇವೆ. ಸಂಸತ್ ಅಧಿವೇಶನ ನಡೆಯುತ್ತಿರುವುದ-ರಿಂದ ತಡವಾಗಬಹುದು. ಆದ-'ರೆ ಶೀಘ್ರದಲ್ಲೇ ಅನುಮತಿ ಸಿಗಲಿದೆ ಎಂದು ನಂಜಯ್ಯನಮಠ ವಿಶ್ವಾಸ ವ್ಯಕ್ತಪಡಿಸಿದರು.

ರಾತ್ರಿ ವಿಮಾನ ಹಾರಾಟಕ್ಕೆ ವ್ಯವಸ್ಥೆ ಮಾಡುವ ಕಾಮಗಾರಿ ಪ್ರಗತಿಯಲ್ಲಿದೆ. ಇನ್ನೊಂದು ವಾರದಲ್ಲಿ ಟೆಂಡರ್ ಪ್ರಕ್ರಿಯೆ ಪೂರ್ಣವಾಗಲಿದೆ. ನೈಟ್ ಲ್ಯಾಂಡಿಂಗ್ ಗಾಗಿ ಭೂಸ್ವಾಧೀನ ಕಾರ್ಯ ಪ್ರಗತಿಯಲ್ಲಿದೆ. ಜನವರಿ ತಿಂಗಳೊಳಗಾಗಿ ವಿಮಾನಯಾನ ಆರಂಭಿಸುವ ಪ್ರಯತ್ನ ಸಫಲವಾಗಲಿದೆ ಎಂದರು.

ತಾಂತ್ರಿಕ ವಿಭಾಗ ಹಾಗೂ ರಾಷ್ಟ್ರೀಯ ವಿಮಾನಯಾನ ಇಲಾಖೆಯಿಂದ ಅಂತಿಮ ಅನುಮೋದನೆ ದೊರಕಿದ ಮೇಲೆ ವಿಮಾನ ಹಾರಾಟ ಆರಂಭವಾಗಲಿದೆ. ಇಲಾಖೆ ಅಧಿಕಾ-ರಿಗಳು ಹಾಗೂ ಗುತ್ತಿಗೆದಾರರ ಶ್ರಮದಿಂದ ಹೊಸ ವರ್ಷದಲ್ಲಿ ವಿಮಾನಯಾನ ಆರಂಭವಾಗಲಿದೆ. ವಿಜಯಪುರ ವಿಮಾನ ನಿಲ್ದಾಣವನ್ನು ಏರ್ ಬಸ್-320 ವಿಮಾನಗಳ ಹಾರಾಟಕ್ಕಾಗಿ ಒಟ್ಟು 618.75 ಕೋಟಿ ರೂ. ಮೊತ್ತಕ್ಕೆ ಮಂಜೂರಾಗಿತ್ತು. ಈ ಕಾಮಗಾರಿಗಾಗಿ ಕರ್ನಾಟಕ ಸರ್ಕಾರದ ಮೂಲ ಸೌಲಭ್ಯ ಅಭಿವೃದ್ಧಿ ಇಲಾಖೆಯಿಂದ ಅನುದಾನ ಭರಿಸಲಾಗುತ್ತಿದೆ. ಈ ಕಾಮಗಾರಿಯ ಮೇಲ್ವಿಚಾರಣೆಗಾಗಿ ಬೆಂಗಳೂರಿನ ಕೆ.ಎಸ್.ಐ.ಐ.ಡಿ.ಸಿ ಸಂಸ್ಥೆಯನ್ನು ನೋಡಲ್ ಏಜೆನ್ಸಿಯಾಗಿ ನೇಮಕ ಮಾಡಲಾಗಿದೆ ಎಂದರು.


ಲೋಕೋಪಯೋಗಿ ಇಲಾಖೆಯಿಂದಲೇ ಕಾಮಗಾರಿ ಅನುಷ್ಠಾನಗೊಳಿಸಲಾಗುತ್ತಿದೆ. ಬೆಂಗಳೂ-ರಿನ ಐಡೆಕ್ ಸಂಸ್ಥೆ ಅವರನ್ನು ಕಾಮಗಾರಿ ನಿರ್ವಹಣೆ ಮತ್ತು ಸಲಹೆಗಾರನ್ನಾಗಿ (ಪಿ.ಎಮ್.ಸಿ) ನೇಮಿಸಲಾಗಿದೆ ಎಂದವರು ವಿವರಿಸಿದರು.

ಸುದ್ದಿಗೋಷ್ಠಿಯಲ್ಲಿ ಲೋಕೋಪಂ ಯೋಗಿಇಲಾಖೆಕಾರ್ಯನಿರ್ವಾಹಕಾಧಿಕಾರಿ ಸಿ.ಎಸ್. ಪೊಲೀಸ್ ಪಾಟೀಲ, ಸಹಾಯಕ ಎಂಜಿನೀಯರ್ ಆರ್.ಎನ್. ಮಸಳಿ, ವಿಮಾನ ನಿಲ್ದಾಣದ ನಿರ್ದೇಶಕ ಪಿ.ಸಿ. ಪೊನ್ನಪ್ಪ ಹಾಗೂ ಚಂದ್ರಶೇಖರ ಸೇ-ರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ಸ್ಟ್ಯಾಂಡ್ (ನೆಲೆಯೂರುವಿಕೆ) & ಕ್ಯಾರಿಯರ್ (ಭವಿಷ್ಯ)

■ ಉದಯರಶ್ಮಿ ದಿನಪತ್ರಿಕೆ

## ಮನದಂಗಳ





ಅಶ್ವದೀಪ ಎನ್ನುವುದು ಒಂದು ಪುರಾತನ ಕೈಮಗ್ಗ ಸಂಸ್ಥೆಯಾಗಿತ್ತು. ಹಲವು ವಿಧದ ಸೀರೆಗಳು ಮತ್ತು ದೇಸೀ ಬಟ್ಟೆಗಳನ್ನು ಇಲ್ಲಿ ವಿಶ್ವದರ್ಜೆಯ ಮಟ್ಟದಲ್ಲಿ ನೇಯಲಾಗುತ್ತಿತ್ತು. ಈ ಸಂಸ್ಥೆಯಲ್ಲಿ ಸಾವಿರಾರು ಮಂದಿ ನೇಕಾರರು ನೇಯ್ಗೆಯ ಕೆಲಸವನ್ನು ಮಾಡುತ್ತಿದ್ದರು. ಈ ಸಂಸ್ಥೆಯ ಮಾಲೀಕನಾದ ಸೋಹನ್ ಲಾಲ್ ತನ್ನ ಸಂಸ್ಥೆಯ ಉದ್ಯೋಗಿಗಳನ್ನು ಅತ್ಯಂತ ಪ್ರೀತಿ ವಿಶ್ವಾಸದಿಂದ ನೋಡಿಕೊಳ್ಳುತ್ತಿದ್ದ. ಅಲ್ಲಿನ ಕೆಲಸಗಾರರೂ ತಮ್ಮ ಸಂಸ್ಥೆ ಮತ್ತು ಮಾಲೀಕನನ್ನು ಅತ್ಯಂತ ಗೌರವದಿಂದ ಕಾಣುತ್ತಿದ್ದರು. ಈ ಸಂಸ್ಥೆಯ ಸಾವಿರಾರು ಕೆಲಸಗಾರರ ಪೈಕಿ ಸೋಹನ್‌ಲಾಲ್‌ಗೆ ನಮನ್ ಎನ್ನುವಾತ ಆತನ ಕೆಲಸದ ಮೇಲಿನ ಬದ್ಧತೆ, ಶ್ರದ್ಧೆ ಮತ್ತು ಕಠಿಣ ಪರಿಶ್ರಮದ ಕಾರಣದಿಂದ ಅತ್ಯಂತ ಅಚ್ಚುಮೆಚ್ಚಿನ ಕೆಲಸಗಾರ ಆಗಿದ್ದ.

ಒಂದು ದಿನ ಸೋಹನ್ ಲಾಲ್ ತನ್ನ ನಿಷ್ಠಾವಂತ ಕೆಲಸಗಾರನಾದ ನಮನ್‌ಗೆ ಸೈಕಲ್ ಒಂದನ್ನು ಉಡುಗೊರೆಯಾಗಿ ನೀಡಿದ. ಈ ಸೈಕಲ್ ಆಗಿನ ಕಾಲದ ಅತ್ಯಂತ ದುಬಾರಿ ಸೈಕಲ್ ಆಗಿದ್ದುದಲ್ಲದೇ ನೋಡಲೂ ಸುಂದರವಾಗಿತ್ತು. ಆದರೆ ಆ ಸೈಕಲ್ ಹಿಂಭಾಗದಲ್ಲಿ ಕ್ಯಾರಿಯರ್ ಇರಲಿಲ್ಲ. ಇದನ್ನು ಗಮನಿಸಿ ನಮನ್ ಸೈಕಲ್ ಹಿಂಭಾಗದಲ್ಲಿ ಕ್ಯಾರಿಯರ್ ಇರಬೇಕು ಎಂದು ಕ್ಯಾರಿಯರ್‌ನ್ನು ಅಳವಡಿಸಿ ಕೊಡುವಂತೆ ಸಂಸ್ಥೆಯ ಮಾಲೀಕ ಸೋಹನ್‌ಲಾಲ್‌ಗೆ ವಿನಂತಿಯನ್ನು ಮಾಡಿದನು. ನಮನ್‌ನ ವಿನಂತಿಯ ಪ್ರಕಾರ ಕ್ಯಾರಿಯರನ್ನು ಮಾಲೀಕ ಅಳವಡಿಸಿ ಕೊಟ್ಟ, ಆದರೆ ಈ ಬಾರಿ ಸೈಕಲ್‌ನ ಸ್ಟ್ಯಾಂಡನ್ನು ಕಳಚಿ ನಮನ್‌ಗೆ ಕೊಟ್ಟನು. ಸ್ಟ್ಯಾಂಡ್ ಇಲ್ಲದೇ ಇರುವುದನ್ನು ಗಮನಿಸಿದ ನಮನ್ ತನ್ನ ಮಾಲೀಕನಲ್ಲಿ ಆಗ ಸೈಕಲ್‌ನಲ್ಲಿ 'ಕ್ಯಾರಿಯರ್' ಇರಲಿಲ್ಲ, ಈಗ 'ಸ್ಟ್ಯಾಂಡ್' ಇಲ್ಲ ಹೀಗೇಕೆ? ಎಂದು ಕೇಳಿದನು.

ಆಗ ಸೋಹನ್‌ಲಾಲ್ ನಗುತ್ತಾ, ಯಾವುದೇ ಖಾಸಗಿ ಸಂಸ್ಥೆಯಲ್ಲಿ ಉದ್ಯೋಗಿಯೊಬ್ಬನಿಗೆ ಉದ್ಯೋಗದಲ್ಲಿ ಆತನ 'ಭವಿಷ್ಯ' (ಕ್ಯಾರಿಯರ್) ಅಥವಾ ಸಂಸ್ಥೆಯಲ್ಲಿ 'ನೆಲೆಯೂರುವಿಕೆ' (ಸ್ಟ್ಯಾಂಡ್)ಗಳ ಪೈಕಿ ಯಾವುದಾದರೂ ಒಂದನ್ನಷ್ಟೇ ಆಯ್ಕೆ ಮಾಡಿಕೊಳ್ಳಲು ಸಾಧ್ಯವಾಗುತ್ತದೆ. ಒಂದು ವೇಳೆ ನೀನು ಉದ್ಯೋಗದಲ್ಲಿ 'ನೆಲೆಯೂರುವಿಕೆ' (ಸ್ಟ್ಯಾಂಡ್) ಯನ್ನು ಆಯ್ಕೆ ಮಾಡಿಕೊಂಡರೆ ನಿನ್ನ ವೃತ್ತಿ ಭವಿಷ್ಯ ಕೊನೆಗೊಳ್ಳುತ್ತದೆ. ಒಂದು ವೇಳೆ ನೀನು ವೃತ್ತಿಯಲ್ಲಿ 'ಭವಿಷ್ಯ'ವನ್ನು (ಕ್ಯಾರಿಯರ್) ಕಟ್ಟಿಕೊಳ್ಳಲು ಬಯಸಿದರೆ ಯಾವತ್ತೂ ಸಂಸ್ಥೆಯಲ್ಲಿ ಒಂದೆಡೆ 'ನೆಲೆಯೂರುವ' (ಸ್ಟ್ಯಾಂಡ್) ಯೋಚನೆಯನ್ನು ಮಾಡಬೇಡ ಎಂದು ಹೇಳಿದರು. ಇದನ್ನು ಕೇಳಿದ ನಮನ್‌ಗೆ ಹೊಸ ವಿಚಾರದ ಅರಿವಾಗಿ ತನ್ನ ಮಾಲೀಕ ಉಡುಗೊರೆಯಾಗಿ ನೀಡಿದ ಸೈಕಲನ್ನು ಸ್ಟ್ಯಾಂಡ್ ರಹಿತವಾಗಿ ಪಡೆದುಕೊಳ್ಳಲು ಒಪ್ಪಿದ.

ಬಹುತೇಕ ಉದ್ಯೋಗಿಗಳು ಇದು ನನ್ನೂರು, ನಾನಿಲ್ಲೇ ಇರಬೇಕು, ನನಗೆ ಹಲವಾರು ಸಮಸ್ಯೆಗಳಿವೆ ಎಂದು ತನ್ನ ಊರಿನಲ್ಲೇ 'ನೆಲೆಯೂರಲು' (ಸ್ಟ್ಯಾಂಡ್) ಬಯಸುತ್ತಾರೆ. ಇಂತವರು ತಮ್ಮ ವೃತ್ತಿಯಲ್ಲಿ 'ಭವಿಷ್ಯ'ವನ್ನು (ಕ್ಯಾರಿಯರ್) ಕಾಣಲು ಮತ್ತು ಕಟ್ಟಿಕೊಳ್ಳಲು ಸಾಧ್ಯವಿಲ್ಲ. ಯಾರು ತನಗೆ ಸಿಕ್ಕ ಅವಕಾಶಗಳನ್ನು ಸಮರ್ಪಕವಾಗಿ ಬಳಸಿಕೊಳ್ಳುತ್ತಾ ವಿವಿಧ ಹುದೆಗಳನ್ನು ಅಲಂಕರಿಸುತ್ತಾರೋ ಅವರು ತಮ್ಮ 'ಭವಿಷ್ಯ'ವನ್ನು (ಕ್ಯಾರಿಯರ್) ಕಟ್ಟಿಕೊಳ್ಳುತ್ತಾರೆ. ಪ್ರತಿಯೊಂದು ಸಂಸ್ಥೆಯಲ್ಲೂ ಸಿಬ್ಬಂದಿಗಳನ್ನು ಕಾಲ ಕಾಲಕ್ಕೆ ಒಂದು ಸ್ಥಳದಿಂದ ಮತ್ತೊಂದು ಸ್ಥಳಕ್ಕೆ ವರ್ಗಾವಣೆ ಮಾಡುವುದು ಹಾಗೂ ಅರ್ಹತೆ ಇದ್ದಾಗ ಭಡ್ತಿ ನೀಡಿ ಅವಶ್ಯಕತೆ ಇರುವ ಬೇರೆಡೆ ಕಳುಹಿಸುವುದು ಸಾಮಾನ್ಯ ಎನ್ನುವುದನ್ನು ಅರಿತಾಗ ಸಿಬ್ಬಂದಿಯೊಬ್ಬನ ವೃತ್ತಿ ಭವಿಷ್ಯ ಉಜ್ವಲವಾಗಿ ಹೊಸ ಹುದ್ದೆಗಳನ್ನು ಅಲಂಕರಿಸುತ್ತಾನೆ.



ಲೇಖನ
– ಸಂತೋಷ್ ರಾವ್ ಪೆರ್ಮುಡ
ಪೆರ್ಮುಡ ಮನೆ, ಪಟ್ರಮೆ ಗ್ರಾಮ
ಮತು ಅಂಚೆ
ಬೆಳಂಗಡೆ ತಾಲೂಕು
ದ.ಕೆ ಜಿಲ್ಲೆ-574198
ದೂ: 9742884160



# ಡಾ.ಬಸವಲಿಂಗ ಪಟ್ಟದ್ದೇವರ ಸಾಹಿತ್ಯ ಪ್ರಶಸ್ತಿಗೆ ಡಾ.ಕೆ.ಎಸ್.ಬಂಧು ಆಯ್ಕೆ



ಕಲಬುರಗಿ: ಭಾಲ್ಕಿಯ ಅಮರಾವತಿ ಶಿವಯ್ಯ ಹಿರೇಮಠ ಪ್ರತಿಷ್ಠಾನದ ವತಿಯಿಂದ ಪ್ರತಿವರ್ಷ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರ ಸಾಹಿತ್ಯ ಪ್ರಶಸ್ತಿ ನೀಡಲಾಗುತ್ತಿದ್ದು, ಪ್ರಸಕ್ತ ಸಾಲಿನ ಈ ಪ್ರಶಸ್ತಿಗೆ ಕಲಬುರಗಿಯ ಹಿರಿಯ ಸಾಹಿತಿ ಡಾ.ಕೆ.ಎಸ್.ಬಂಧು ಅವರು ಆಯ್ಕೆಗೊಂಡಿದ್ದಾರೆ. ಈ ಪ್ರಶಸ್ತಿಯನ್ನು ಆ.24 ರಂದು ಸಾಯಂಕಾಲ 6 ಗಂಟೆಗೆ ಭಾಲ್ಕಿಯ ಶ್ರೀ ಚನ್ನಬಸವಾಶ್ರಮದಲ್ಲಿ ಪ್ರದಾನ ಮಾಡಲಾಗುವುದು ಎಂದು ಪ್ರತಿಷ್ಠಾನದ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಪ್ರಶಸ್ತಿ ಪುರಸ್ಕೃತರ ಸಂಕ್ಷಿಪ್ತ ಪರಿಚಯ: ಡಾ.ಕೆ.ಎಸ್.ಬಂಧು ಅವರು ಮೂಲತಃ ಭಾಲ್ಕಿ ತಾಲೂಕಿನ ಸಿದ್ದೇಶ್ವರ ಗ್ರಾಮದವರು. ಇವರು ಅತ್ಯಂತ ಬಡತನದಲ್ಲಿ ಶಿಕ್ಷಣ ಪಡೆದು. ಶಿಕ್ಷಕರಾಗಿ, ಪ್ರಾಧ್ಯಾಪಕರಾಗಿ ಸೇವೆ ಸಲ್ಲಿಸಿ ವಯೋನಿವೃತ್ತಿ ಹೊಂದಿದ್ದಾರೆ. ವೃತ್ತಿಯಿಂದ ಅಧ್ಯಾಪಕರಾದ ಇವರು ಪ್ರವೃತ್ತಿಯಿಂದ ಉತ್ತಮ ಸಾಹಿತಿಗಳಾಗಿದ್ದಾರೆ. ಬುದ್ದ-ಬಸವ-ಅಂಬೇಡ್ಕರ್ ಅವರ ಚಿಂತನೆಗಳನ್ನು ಮೈಗೂಡಿಸಿಕೊಂಡು ಅವುಗಳ ಪ್ರಸಾರವೇ ಪ್ರಾಣ ಜೀವಾಳವಾಗಿಸಿಕೊಂಡಿದ್ದಾರೆ. ಸರಳ, ಸಹಜ, ಸಾತ್ವಿಕ ಬದುಕು ರೂಪಿಸಿಕೊಂಡು ಕನ್ನಡ ಸಾಹಿತ್ಯಕ್ಕೆ ಅಮೂಲ್ಯ ಕೊಡುಗೆ ನೀಡಿದ್ದಾರೆ. ಸುಮಾರು 23 ಕೃತಿಗಳನ್ನು ರಚಿಸುವ ಮೂಲಕ ಕನ್ನಡ ಸಾಹಿತ್ಯ ಶ್ರೀಮಂತಗೊಳಿಸಿದ್ದಾರೆ. ಇವರು ಸಮಾಜಕ್ಕೆ ಉಪಯುಕ್ತವಾಗುವ ವಿಷಯಗಳು ಅಲಕ್ಷಿತವಾದ ಸಂಗತಿಗಳನ್ನು ತಮ್ಮ ಲೇಖನ ಸಾಮಗ್ರಿಯಾಗಿ ಬಳಸಿಕೊಂಡು ಸಮಾಜಕ್ಕೆ ಹೊಸ ಚಿಂತನೆಗಳನ್ನು ನೀಡುತ್ತಿದ್ದಾರೆ. ಧಾರ್ಮಿಕ, ಸಾಮಾಜಿಕ ಹಾಗೂ ಸಾಹಿತ್ಯಕ ಸಂಸ್ಥೆಯ ಸಂಘಟನೆಗಳಲ್ಲಿ ಸಕ್ರಿಯವಾಗಿ ಕಾರ್ಯನಿರ್ವಹಿಸುತ್ತ ಸರ್ವರ ಪ್ರೀತಿಗೆ ಪಾತ್ರರಾಗಿದ್ದಾರೆ. ಇಂತಹ ಅವರೂಪದ ಶರಣ ಜೀವಿಗಳನ್ನು ಪ್ರಕಸ್ತ ಸಾಲಿನ ಪ್ರಶಸ್ತಿ ಆಯ್ಕೆ ಮಾಡಿರುವುದು ನಮಗೆ ಅಪಾರ ಸಂತೋಷ ತಂದಿದೆ ಎಂದು ಸಾಹಿತಿ ಸಿರಿಗನ್ನಡ ವೇದಿಕೆ ಅಧ್ಯಕ್ಷ ಡಾ.ಗವಿಸಿದ್ಧಪ್ಪ ಪಾಟೀಲ, ಡಾ.ಜಯದೇವಿ ಗಾಯಕವಾಡ,,ವಿಶ್ರಾಂತ ಕುಲಪತಿ ಡಾ.ಟಿ. ಎಂ.ಭಾಸ್ಕರ್,ಡಾ.ರಾಜಕುಮಾರ ಮಾಳಗೆ, ಡಾ.ಶೀಲಾದೇವಿ ಬಿರಾದಾರ,ಡಾ.ಸಿದ್ಧಪ್ಪ ಹೊಸಮನಿ ಸೇರಿದಂತೆ ಇತರರು ಹರ್ಷ ವ್ಯಕ್ತಪಡಿಸಿದ್ದಾರೆ.




ಕಲಬುರಗಿ: ಜಿಲ್ಲಾ ಕಾಂಗ್ರೆಸ್ ಪ್ರಚಾರ ಸಮಿತಿ ವತಿಯಿಂದ ಮಾಜಿ ಪ್ರಧಾನಿ ದಿ.ರಾಜೀವ್ ಗಾಂಧಿ ಹಾಗೂ ಮಾಜಿ ಮುಖ್ಯಮಂತ್ರಿ ದಿ. ದೇವರಾಜ ಅರಸ್ ಅವರ ಜನ್ಮದಿನಾಚರಣೆ ಅಂಗವಾಗಿ ಕಲಬುರಗಿ ಜಿಲ್ಲಾ ಸರ್ಕಾರಿ ಆಸ್ಪತ್ರೆಯಲ್ಲಿ ರೋಗಿಗಳಿಗೆ ಹಣ್ಣು ಹಂಪಲು ವಿತರಿಸಲಾಯಿತು.ಈ ಸಂದರ್ಭದಲ್ಲಿ ಅಶೋಕ ವೀರನಾಯಕ,ಡಾ.ಕಿರಣ ದೇಶಮುಖ,ನೀಲಕಂಠರಾವ ಮೂಲಗೆ,ನಂದಕುಮಾರ ನಾಗಭುಜಂಗೆ,ಹುಲಗೆಪ್ಪ ಕನಕಗಿರಿ,ಫಾರೂಕ್ ಮಣಿಯಾಲ್,ಅಮರ್ ಅಲ್ಲಮಪ್ರಭು ಪಾಟೀಲ ಮೊದಲಾದ ಕಾಂಗ್ರೆಸ್ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದು, ರೋಗಿಗಳ ಆರೋಗ್ಯ ವಿಚಾರಿಸಿ ಶುಭ ಹಾರೈಸಿದರು.

# ಕರ್ತವ್ಯಲೋಪ: ಇಬ್ಬರು ಪೊಲೀಸರ ಅಮಾನತು

ಕಲಬುರಗಿ:ನಗರದ ಅಶೋಕ ನಗರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ವ್ಯಕ್ತಿ ಕಾಣೆಯಾದ ಪ್ರಕರಣಕ್ಕೆ ಸಂಬಂಧಿಸಿದಂತೆ ತನಿಖೆಯ ನಂತರ ಕೊಲೆ ಪ್ರಕರಣ ದಾಖಲಾಗಿದ್ದು, ಈ ಕೊಲೆ ಪ್ರಕರಣದ ಕುರಿತು ಮಾಹಿತಿ ಸಂಗ್ರಹಿಸುವಲ್ಲಿ ಕರ್ತವ್ಯ ಲೋಪವೆಸಗಿದ ಠಾಣೆಯ ಪೊಲೀಸ್ ಕಾನ್ಸಟೇಬಲ್‌ಗಳಾದ ನೀಲಕಂಠ ಪಾಟೀಲ್ ಹಾಗೂ ಚಂದ್ರಶೇಖರ್ ಅವರ ವಿರುದ್ಧ ಪೊಲೀಸ್ ಆಯುಕ್ತರು ಇಲಾಖಾ ಶಿಸ್ತಿನ ಕ್ರಮ ಬಾಕಿಯಲ್ಲಿರಿಸಿ ಸೇವೆಯಿಂದ ಅಮಾನತ್ತುಗೊಳಿಸಿ ಆದೇಶಿಸಿದ್ದಾರೆ.



ಕಲಬುರಗಿ: ಕಲಬುರಗಿ ಜಿಲ್ಲೆ ಬರಗಾಲ ಘೋಷಣೆ ಸೇರಿದಂತೆ ವಿವಿಧ ಬೇಡಿಕೆಗಳಿಗೆ ಆಗ್ರಹಿಸಿ ಇಂದು ಸಂಯುಕ್ತ ಹೋರಾಟ ಕರ್ನಾಟಕ ಕಲಬುರಗಿ ಸಂಘಟನೆಯಿಂದ ಸ್ವಯಂಪ್ರೇರಿತ ಕಲಬುರಗಿ ಬಂದ್ ನಡೆಸಲಾಯಿತು.ರೈತ ಸಂಘಟನೆಗಳು ಮತ್ತು ಎಡಪಕ್ಷಗಳ ನೇತೃತ್ವದಲ್ಲಿ ನಡೆದ ಪ್ರತಿಭಟನೆಯಲ್ಲಿ ಶರಣಬಸಪ್ಪ ಮಮಶೆಟ್ಟಿ ಮತ್ತು ಇತರ ಮುಖಂಡರು ಪಾಲ್ಗೊಂಡರು.




ಕಲಬುರಗಿ: ರಾಜ್ಯದಲ್ಲಿ ಖಾಲಿ ಇರುವ ಉರ್ದು ಮತ್ತು ಮರಾಠಿ ಭಾಷೆಯ ಶಿಕ್ಷಕರ ನೇಮಕಾತಿಯನ್ನು ನಿರ್ಲಕ್ಷಿಸುತ್ತಿರುವದನ್ನು ಖಂಡಿಸಿ ಇಂದು ಆಲ್ ಇಂಡಿಯಾ ಮಜ್ಲಿಸ್ -ಇ- ಇತ್ತೇಹಾದುಲ್ ಮುಸ್ಲಿಮೀನ (ಎಐಎಂಐಎಂ)ವತಿಯಿಂದ ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನೆ ನಡೆಸಿ ಮನವಿ ಸಲ್ಲಿಸಲಾಯಿತು.

# ಬರಪೀಡಿತ ಜಿಲ್ಲೆ ಘೋಷಣೆಗೆ ಆಗ್ರಹಿಸಿ "ಕಲಬುರಗಿ ಬಂದ್"



ಕಲಬುರಗಿ:ಕಲಬುರಗಿಯನ್ನು ಬರಪೀಡಿತ ಜಿಲ್ಲೆ ಎಂದು ಘೋಷಿಸುವುದು ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಸಂಯುಕ್ತ-ಹೋರಾಟ ಕರ್ನಾಟಕ ಸಂಘಟನೆ ನೇತೃತ್ವದಲ್ಲಿ ಇಂದು ಕರೆ ನೀಡಿದ್ದ "ಕಲಬುರಗಿ ಬಂದ್"ಗೆ ಮಿಶ್ರ ಪ್ರತಿಕ್ರಿಯೆ ವ್ಯಕ್ತವಾಗಿದೆ.

ಬೆಳಿಗ್ಗೆ ನಗರದ ಕೇಂದ್ರ ಬಸ್ ನಿಲ್ದಾಣದ ಎದುರು ಜಮಾಯಿಸಿದ ವಿವಿಧ ಸಂಘಟನೆಗಳ ಮುಖಂಡರು ಬಸ್ ಸಂಚಾರ ತಡೆದು ಪ್ರತಿಭಟನೆ ನಡೆಸಿದರು. ಇದರಿಂದ ಬಸ್ ಸಂಚಾರದಲ್ಲಿ ವ್ಯತ್ಯಯ ಉಂಟಾಗಿ ಪ್ರಯಾಣಿಕರು ಪರದಾಡುವಂತಾಯಿತು. ಪ್ರತಿಭಟನೆ ಹಿನ್ನೆಲೆಯಲ್ಲಿ ಬಸ್ ಸಂಚಾರ ಸ್ಥಗಿತೊಳಿಸಿದ್ದರಿಂದ ಬಸ್‌ಗಳು ಮತ್ತು ಪ್ರಯಾಣಿಕರಿಲ್ಲದೆ ಕೇಂದ್ರ ಬಸ್ ನಿಲ್ದಾಣ ಭಣಗುಡುತ್ತಲಿತ್ತು.

ನಗರದ ಗಂಜ್ ಪ್ರದೇಶದಲ್ಲೂ ರೈತರು ಬಸ್ ಸಂಚಾರ ತಡೆದು ಪ್ರತಿಭಟನೆ ನಡೆಸಿದರು. ಬಂದ್ ಹಿನ್ನೆಲೆಯಲ್ಲಿ ಗಂಜ್ ಪ್ರದೇಶದಲ್ಲಿನ ಅಂಗಡಿ ಮುಂಗಟ್ಟುಗಳು ಸಂಪೂರ್ಣ ಬಂದ್ ಆಗಿದ್ದವು. ಇನ್ನುಳಿದಂತೆ ನಗರದ ಪ್ರಮುಖ ಜನನಿಬಿಡ ಪ್ರದೇಶಗಳಾದ ಸುಪರ್ ಮಾರ್ಕೆಟ್ ಸೇರಿದಂತೆ ಇತರೆಡೆ' ನೀರಸ ಪ್ರತಿಕ್ರಿಯೆ ಕಂಡು ಬಂತು.

ಸೂಪರ್ ಎನಿನೋ ಪರಿಣಾಮದಿಂದ ಜಿಲ್ಲೆಯಲ್ಲಿ ಭೀಕರ ಬರದ ಛಾಯೆ ಆವರಿಸಿದೆ. ಮುಂಗಾರು ಬೆಳೆ ಸಂಪೂರ್ಣವಾಗಿ ಕೈಕೊಟ್ಟಿದೆ. ಕಳೆದ ವರ್ಷದ ಬೆಳೆ ವಿಮೆ ಪರಿಹಾರ ವಿತರಣೆಯಲ್ಲಿ ಅನ್ಯಾಯವಾಗಿದೆ. ಬರ ಘೋಷಿಸಿ ತುರ್ತು ಕ್ರಮ ಕೈಗೊಳ್ಳಲು ಸರ್ಕಾರಗಳು ಹಿಂದೇಟು ಹಾಕುತ್ತಿವೆ. ಸರ್ಕಾರ ಕೂಡಲೇ ಜಿಲ್ಲೆಯನ್ನು ಬರ ಪೀಡಿತ ಎಂದು ಘೋಷಿಸಬೇಕು, ಪ್ರತಿ ಎಕರೆಗೆ ತಲಾ 50 ಸಾವಿರ ಪರಿಹಾರ ನೀಡಬೇಕು, ರೈತರ ಸಾಲ ಮನ್ನಾ ಮಾಡಬೇಕು, ಮಹಾರಾಷ್ಟ್ರದ ಉಜನಿ ಡ್ಯಾಂನಿಂದ ಕರ್ನಾಟಕದ ಪಾಲಿನ 15 ಟಿಎಂಸಿ ನೀರು ಬಿಡುಗಡೆ ಮಾಡಬೇಕು ಎಂದು ಪ್ರತಿಭಟನಾಕಾರರು ಆಗ್ರಹಿಸಿದರು.

ಮುಂಗಾರು ಮಳೆಯ ಕೊರತೆಯಿಂದ ಜಿಲ್ಲೆಯಾದ್ಯಂತ ಕೃಷಿ ಚಟುವಟಿಕೆಗಳು ಸ್ಥಗಿತಗೊಂಡಿವೆ. ಹೆಸರು, ಉದ್ದು, ಸೋಯಾಬೀನ್, ಎಳ್ಳು, ಹತ್ತಿ, ಕಬ್ಬು ಸೇರಿದಂತೆ ಪ್ರಮುಖ ಬೆಳೆಗಳು ಸಮರ್ಪಕವಾಗಿ ಬೆಳವಣಿಗೆಯಾಗದೆ ರೈತರು ಭಾರಿ ನಷ್ಟ ಅನುಭವಿಸುತ್ತಿದ್ದಾರೆ. ಸರ್ಕಾರ ಬರ ಪರಿಹಾರ ಘೋಷಿಸುವಲ್ಲಿ ವಿಳಂಬ ಮಾಡುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಸಂಯುಕ್ತ-ಹೋರಾಟ ಕರ್ನಾಟಕದ ಸಂಚಾಲಕ ಶರಣಬಸಪ್ಪ ಮಮಶೆಟ್ಟಿ, ರೈತ ಮುಖಂಡರಾದ ಭೀಮಾಶಂಕರ ಮಾಡಿಯಾಳ, ಮೌಲಾ ಮುಲ್ಲಾ, ನಾಗೇಂದ್ರ ಥಂಬೆ, ಎಂ. ಬಿ. ಸಜ್ಜನ್, ಕರೆಪ್ಪ ಕರಗೊಂಡ, ಸಿದ್ದು ಎಸ್. ಎಲ್., ಪದ್ಮಿನಿ ಕಿರಣಗಿ, ಅಶ್ಫಾಕ್ ಮುಲ್ಲಾ ಸೇರಿದಂತೆ ಹಲವಾರು ಜನ ರೈತರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.ಕರ್ನಾಟಕ ಪ್ರಾಂತ ರೈತ ಸಂಘ, ಅಖಿಲ ಭಾರತ ಕಿಸಾನ್ ಸಭಾ, ಕರ್ನಾಟಕ ರಾಜ್ಯ ರೈತ ಸಂಘ, ಜೈ ಕನ್ನಡಿಗರ ರಕ್ಷಣಾ ವೇದಿಕೆ, ಕರ್ನಾಟಕ ರಕ್ಷಣಾ ವೇದಿಕೆ, ಡಿಎಸ್‌ಎಸ್, ಕರ್ನಾಟಕ ನವ ನಿರ್ಮಾಣ ಸೇನೆ, ಕಲ್ಯಾಣ ಕರ್ನಾಟಕ ರಕ್ಷಣಾ ವೇದಿಕೆ ಸೇರಿದಂತೆ ವಿವಿಧ ಸಂಘಟನೆಗಳು ಬೆಂಬಲ ಸೂಚಿಸಿದ್ದು, ಬಂದ್ ಹಿನ್ನೆಲೆಯಲ್ಲಿ ಕೇಂದ್ರ ಬಸ್ ನಿಲ್ದಾಣ ಸೇರಿದಂತೆ ಹಲವೆಡೆ ಬಿಗಿ ಪೊಲೀಸ್ ಬಂದೋಬಸ್ತ್ ವಹಿಸಲಾಗಿದೆ.

# ಕವಿಗಳ ಕಾವ್ಯವನ್ನು ನಿರಂತರ ಓದು ಅವಶ್ಯಕ: ಹೊನ್ಕಲ್

ಕಲಬುರಗಿ: ಹಿರಿಯ ಕವಿಗಳ ಕಾವ್ಯವನ್ನು ನಿರಂತರವಾಗಿ ಓದುವುದರ ಮೂಲಕ ಯುವ ಬರಹಗಾರರ ಕಾವ್ಯ ಗಟ್ಟಿಗೊಳ್ಳಲು ಸಾಧ್ಯವಾಗುತ್ತದೆ ಎಂದು ನಾಡಿನ ಹಿರಿಯ ಸಾಹಿತಿ ಡಾ.ಸಿದ್ದರಾಮ ಹೊನ್ಕಲ್ ಹೇಳಿದರು.

ಕಲ್ಬುರ್ಗಿ ಸಾಂಸ್ಕೃತಿಕ ಪ್ರತಿಷ್ಠಾನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಂಯುಕ್ತ ಆಶ್ರಯದಲ್ಲಿ ಹಮ್ಮಿಕೊಂಡಿದ್ದ ಕವಿ ಸಮ್ಮೇಳನ , ಸಂಗೀತ ಸಂಭ್ರಮ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳ ಉದ್ಘಾಟನೆ ಮಾಡಿ ಮಾತನಾಡಿದ ಅವರು, ಯುವ ಸಾಹಿತಿಗಳು ತಾವು ಬರೆದ ಕವನಗಳನ್ನು ಇನ್ನೊಬ್ಬರಿಗೆ ತೋರಿಸಿ ತಿದ್ದಿಸಿಕೊಂಡರೆ ಕಾವ್ಯ ಶುದ್ಧವಾಗುತ್ತದೆ ಎಂದು ಹೇಳಿದರು.ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ ಡಾ.ವಿಜಯಕುಮಾರ್ ಪರುತೆ ಅವರು ಮಾತನಾಡುತ್ತ ಇಲ್ಲಿ ಅನೇಕ ಕವಿಗಳು ಉತ್ತಮ ರೀತಿಯಲ್ಲಿ ಕವನ ವಾಚನ ಮಾಡಿದರು. ಕವಿ ಸಮ್ಮೇಳನ ತುಂಬಾ ಅದ್ಭುತವಾಗಿ ನಡೆದು ಬಂತು ಎಂದು ಹೇಳಿದರು.ಶಿವಾನಂದ ಖಜುಗಿ9 ಅವರು ಬಿ ಎಚ್ ನಿರಗುಡಿ ಅವರು ಬರೆದ ಸೂಫಿಸಂತ ಬಂದೇ ನವಾಜರ ಪುಸ್ತಕ ಬಿಡುಗಡೆ ಮಾಡಿದರು.ಕಾರ್ಯಕ್ರಮದ ಮುಖ್ಯ ಅತಿಥಿಯಾಗಿ ಚಿಂತಕ ಪ್ರೊ.ಯಶ್ವಂತರಾಯ ಅಷ್ಟಗಿ ,ಸಂಘಟಕ ಶರಣಗೌಡ ಪಾಟೀಲ್ ಪಾಳಾ, ಸುಮಾಜ ಸೇವಕರಾದ ನೀಲಕಂಠ ಜಮಾದಾರ ಹಾಗೂ ಪ್ರತಿಷ್ಠಾನದ ಅಧ್ಯಕ್ಷ ಬಿ.ಎಚ್.ನಿರಗುಡಿ ಪ್ರಾಸ್ತಾವಿಕ ಮಾತನಾಡಿದರು.



ಕವಿ ಸಮ್ಮೇಳನದಲ್ಲಿ ಕವಿಗಳು: ಚಾಮರಾಜ ದೊಡ್ಡಮನಿ, ಮಾಲಾ ಕಣ್ಣಿ, ರಾಜೇಂದ್ರ ಝಳಕಿ ,ಡಾ ಪರ್ವಿನ್ ಸುಲ್ತಾನಾ, ಪರಮಾನಂದ ಸರಸಂಬಿ ,ಬಾಬು ಜಾಧವ್ ,ರೇವಣಸಿದ್ದಪ್ಪ ದುಖಾನ್, ಗೋದಾವರಿ ಪಡಶೆಟ್ಟಿ ,ಮಂಜುಳಾ ಪಾಟೀಲ್, ಪಲ್ಲವಿ ಕುಲಕರ್ಣಿ, ಸುನಿತಾ ಮುಲಗೆ, ಶ್ರೀಶೈಲ ಮದಾನೆ ಮುಂತಾದವರು ಕವನ ವಾಚನ ಮಾಡಿದರು.ಸಂಗೀತ ಸಂಭ್ರಮದಲ್ಲಿ ಜನಪ್ರಿಯ ಕಲಾವಿದರು ಅಣ್ಣಾರಾಯ ಮತ್ತಿಮೂಡ, ಬಾಬುರಾವ ಕೋಬಾಳ್, ಸೂರ್ಯಕಾಂತ್ ಪೂಜಾರಿ, ಸೈದಪ್ಪ ಸಪ್ಪನಗೋಳ, ಬಸಯ್ಯಾ ಗುತ್ತೇದಾರ್, ಸೂರ್ಯಕಾಂತ ಹೊಳೇಅವರಾದ ಮುಂತಾದವರು ಸಂಗೀತ ಕಾರ್ಯಕ್ರಮ ನಡೆಸಿಕೊಟ್ಟರು ವೀರಭದ್ರಯ್ಯ ಸ್ಥಾವರಮಠ, ಮೌನೇಶ್ ಪಂಚಾಳ ವಾದ್ಯ ಸಹಕಾರ ನೀಡಿದರು. ಕುಮಾರಿ ಸುಮನ್ ಮಳಕೇಡಕರ್ ಭರತನಾಟ್ಯ ಮಾಡಿದರು.

# ವಿಕಸಿತ ಭಾರತ ನಿರ್ಮಾಣದಲ್ಲಿ ಯುವಶಕ್ತಿಯೇ ನಿರ್ಣಾಯಕ: ಬಟ್ಟು ಸತ್ಯನಾರಾಯಣ

ಕಲಬುರಗಿ: ಸಿಯುಕೆ ಗಣಿತ ವಿಭಾಗದಲ್ಲಿ ಹೊಸ ಕಂಪ್ಯೂಟಿಂಗ್, ಎಪಿಸಿ ಪ್ರಯೋಗಾಲಯ ಹಾಗೂ ಎಬಿಎಎಂ ಗ್ರಂಥಾಲಯ ಉದ್ಘಾಟನೆ; ವಿದ್ಯಾರ್ಥಿಗಳ ಸಂಶೋಧನೆ ಮತ್ತು ನಾವೀನ್ಯತೆಗೆ ಮತ್ತಷ್ಟು ಉತ್ತೇಜನ"

ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದ (ಸಿಯುಕೆ) ಗಣಿತ ವಿಭಾಗದ ವತಿಯಿಂದ ಕಂಪ್ಯೂಟಿಂಗ್ ಪ್ರಯೋಗಾಲಯ, ಹೈ ಪರ್ಫಾರ್ಮೆನ್ಸ್ ಕಂಪ್ಯೂಟಿಂಗ್ (ಎಪಿಸಿ) ಪ್ರಯೋಗಾಲಯ ಹಾಗೂ ರಾಷ್ಟ್ರೀಯ ಉನ್ನತ ಗಣಿತ ಮಂಡಳಿ (ಎಬಿಎಎಂ) ಗ್ರಂಥಾಲಯವನ್ನು ಇಂದು ಉದ್ಘಾಟಿಸಲಾಯಿತು.ಕುಲಪತಿ ಪ್ರೊ. ಬಟ್ಟು ಸತ್ಯನಾರಾಯಣ ಅವರು ನೂತನ ಸೌಲಭ್ಯಗಳನ್ನು ಉದ್ಘಾಟಿಸಿದರು. ಈ ಸಂದರ್ಭದಲ್ಲಿ ಬಿ.ಟೆಕ್. ಗಣಿತ ಮತ್ತು ಕಂಪ್ಯೂಟಿಂಗ್ ವಿದ್ಯಾರ್ಥಿಗಳಿಗಾಗಿ ದೇಶ ಹಾಗೂ ವಿದೇಶಗಳಲ್ಲಿನ ವೃತ್ತಿ ಮತ್ತು ಉನ್ನತ ಶಿಕ್ಷಣದ ಅವಕಾಶಗಳ ಕುರಿತು 'ನಿಮ್ಮ ವೃತ್ತಿ ಪಥ ರೂಪಿಸಿಕೊಳ್ಳಿ' ಎಂಬ ವೃತ್ತಿ ಮಾರ್ಗದರ್ಶಿ ಪುಸ್ತಕ ಬಿಡುಗಡೆ ಮಾಡಿದರು.



ಕಾರ್ಯಕ್ರಮವನ್ನುದ್ದೇಶಿಸಿ ಮಾತನಾಡಿದ ಕುಲಪತಿಗಳು, ವಿದ್ಯಾರ್ಥಿಗಳು ಹೊಸ ಚಿಂತನೆಯೊಂದಿಗೆ ನಾವೀನ್ಯತೆ, ಸಂಶೋಧನೆ ಮತ್ತು ಉದ್ಯಮಶೀಲತೆಯ ಕ್ಷೇತ್ರಗಳಲ್ಲಿ ಮುಂಚೂಣಿಯಲ್ಲಿರಬೇಕು ಹಾಗೂ ಸೃಜನಶೀಲತೆ, ತಂತ್ರಜ್ಞಾನ, ಹೊಸ ಆಲೋಚನೆಗಳು ಮತ್ತು ನವೋದ್ಯಮಗಳ ಮೂಲಕ ರಾಷ್ಟ್ರದ ಅಭಿವೃದ್ಧಿಗೆ ಕೊಡುಗೆ ನೀಡಬೇಕು ಎಂದು ಕರೆ ನೀಡಿದರು. ಕೇವಲ ಪಠ್ಯಾಧಾರಿತ ಜ್ಞಾನಕ್ಕೆ ಸೀಮಿತವಾಗದೆ, ಪ್ರಾಯೋಗಿಕ ಕೌಶಲ್ಯ, ನಾವೀನ್ಯತೆ ಹಾಗೂ ನಿರಂತರ ಕಲಿಕೆಯ ಮನೋಭಾವವನ್ನು ಬೆಳೆಸಿಕೊಳ್ಳುವ ಅಗತ್ಯವಿದೆ ಎಂದು ಅವರು ಹೇಳಿದರು.

"ಪ್ರಧಾನಮಂತ್ರಿ ಅವರ ವಿಕಸಿತ ಭಾರತ@2047ರ ಆಶಯವನ್ನು ಸಾಕಾರಗೊಳಿಸುವಲ್ಲಿ ಯುವ ಮನಸ್ಸುಗಳ ಸಂಶೋಧನೆ ಮತ್ತು ನಾವೀನ್ಯತೆ ಮಹತ್ವದ ಪಾತ್ರ ವಹಿಸಲಿದೆ" ಎಂದರು. ಮುಂದುವರಿದ ಕಲಿಕೆ, ಸಂಶೋಧನೆ ಮತ್ತು ಕೌಶಲ್ಯಾಭಿವೃದ್ಧಿಗಾಗಿ ಕಂಪ್ಯೂಟಿಂಗ್ ಪ್ರಯೋಗಾಲಯ, ಎಪಿಸಿ ಪ್ರಯೋಗಾಲಯ ಹಾಗೂ ಎಬಿಎಎಂ ಗ್ರಂಥಾಲಯದ ಸೌಲಭ್ಯಗಳನ್ನು ಪರಿಣಾಮಕಾರಿಯಾಗಿ ಬಳಸಿಕೊಳ್ಳಬೇಕು ಎಂದು ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು. ಗಣಿತ ವಿಭಾಗದ ಮುಖ್ಯಸ್ಥ ಪ್ರೊ. ಜಿ. ಜನಾರ್ದನ ರೆಡ್ಡಿ ಅವರು ಸ್ವಾಗತಿಸಿ, ನೂತನವಾಗಿ ಸ್ಥಾಪಿಸಲಾದ ಸೌಲಭ್ಯಗಳ ಮಹತ್ವ ಹಾಗೂ ಅವುಗಳ ಶೈಕ್ಷಣಿಕ ಮತ್ತು ಸಂಶೋಧನಾ ಬಳಕೆಯ ಕುರಿತು ವಿವರಿಸಿದರು. ವಿ.ವಿ.ಯ ಪರೀಕ್ಷಾ ನಿಯಂತ್ರಕ ಪ್ರೊ. ಭರತ್ ಕುಮಾರ್, ಭೌತ ವಿಜ್ಞಾನ ನಿಕಾಯದ ಡೀನ್ ಪ್ರೊ. ರಾಜೀವ್ ಶೇಷ ಜೋಶಿ ಹಾಗೂ ಕೇಂದ್ರ ಗ್ರಂಥಪಾಲಕ ಡಾ. ಪಿ. ಎಸ್. ಕಟ್ಟಿಮನಿ ಅವರು ಮಾತನಾಡಿದರು.

ಕಾರ್ಯಕ್ರಮವು "ವಂದೇ ಮಾತರಂ"ದೊಂದಿಗೆ ಆರಂಭವಾಗಿ, ರಾಷ್ಟ್ರಗೀತೆಯೊಂದಿಗೆ ಮುಕ್ತಾಯವಾಯಿತು. ಡಾ. ಮೇಘಾ ಖಂಡೇಲ್ವಾಲ್ ನಿರೂಪಿಸಿದರು.

# ಪರೀಕ್ಷೆಯ ರಕ್ಷೆ

## ನಾವು - ನಮ್ಮವರು

(ಮಕ್ಕಳ ಬೆಳವಣಿಗೆಯಲ್ಲಿ ಪಾಲಕರ ಪಾತ್ರ ಕುರಿತು ಲೇಖನ ಮಾಲಿಕೆ)



■ ಉದಯರಶ್ಮಿ ದಿನಪತ್ರಿಕೆ

ಓರ್ವ ರೈತ ತನ್ನ ಹೊಲವನ್ನು ಉತ್ತು, ಹದ ಮಾಡಿ, ಬೀಜವನ್ನು ಬಿತ್ತಿ, ತಾನು ಮಾಡಿದ ಎಲ್ಲಾ ಕೆಲಸಗಳಿಗೆ ಪ್ರತಿಫಲವಾಗಿ ಒಳ್ಳೆಯ ಬೆಳೆಯ ನಿರೀಕ್ಷೆಯಲ್ಲಿ ತೊಡಗುತ್ತಾನೆ. ಆತನ ಪಾಲಿಗೆ ಬೀಜದಲ್ಲಿಯೇ ಬ್ರಹ್ಮಾಂಡವಿದೆ.ಅಂತೆಯೇ ಮಕ್ಕಳು ಕೂಡ ಬ್ರಹ್ಮಾಂಡ ಶಕ್ತಿಯ ಆಗರವಿದ್ದಂತೆ. ಮಕ್ಕಳ ಮೆದುಳು ಸಾಮಾಜಿಕ, ಧಾರ್ಮಿಕ ಮತ್ತು ಶೈಕ್ಷಣಿಕ ವಿಷಯಗಳ ಕುರಿತು ಎಲ್ಲವನ್ನು ಸಮಾನ ಆಸಕ್ತಿಯಿಂದ ಕಲಿತು ತನ್ನಲ್ಲಿ ಅಡಕಗೊಳಿಸಿಕೊಳ್ಳಬೇಕು.ಅಂತೆಯೇ ಪರೀಕ್ಷೆ ಎಂಬ ವಿಷಯ ಮಕ್ಕಳಿಗೆ ರಕ್ಷೆಯಾಗಿ ಭಾಸವಾಗಬೇಕು.

ಮಕ್ಕಳು ಪರೀಕ್ಷೆಯ ವಿಷಯದಲ್ಲಿ ಯಾವುದೇ ರೀತಿಯ ಆತಂಕವನ್ನು ಹೊಂದಿರದೆ ಆತ್ಮವಿಶ್ವಾಸದಿಂದ ಪರೀಕ್ಷೆಯನ್ನು ಎದುರಿಸಲು ಮನೆಯೇ ಮೊದಲ ರಕ್ಷೆಯಾಗಬೇಕು.

"ಮನೆಯ ಮೊದಲ ಪಾಠಶಾಲೆ ಜನನಿ ತಾನೇ ಮೊದಲ ಗುರುವು, ಜನನಿಯಿಂದ ಪಾಠ ಕಲಿತ ಜನರು ನಾವೇ ಧನ್ಯರು" ಎಂಬ ಮಾತಿನಂತೆ ತಾಯಿಯು ಮಗುವಿನಲ್ಲಿ ಧೈರ್ಯ, ಭರವಸೆ ಮತ್ತು ಆತ್ಮವಿಶ್ವಾಸಗಳನ್ನು ಉದ್ದೀಪಿಸಬಲ್ಲಳು.

ಪಾಲಕರಾಗಲಿ ಶಿಕ್ಷಕರಾಗಲಿ ಮಕ್ಕಳಿಗೆ ಕುಳಿತರೆ ನಿಂತರೆ ಊಟ ಮಾಡುತ್ತಿರಲಿ, ಆಟ ಆಡುತ್ತಿರಲಿ ಪದೇ ಪದೇ ಪರೀಕ್ಷೆಯ ವಿಷಯವನ್ನು ನೆನಪಿಸಿ ಭೀತಿಯನ್ನು ಹುಟ್ಟಿಸಬಾರದು. ಪರೀಕ್ಷೆ ಎಂಬುದು ಅವರ ಇದುವರೆಗಿನ ಕಲಿಕಾ ಸಾಮರ್ಥ್ಯವನ್ನು ಒರೆಗೆ ಹಚ್ಚುವ ಪ್ರಕ್ರಿಯೆ ಎಂಬಂತೆ ಮಕ್ಕಳಿಗೆ ಭಾಸವಾಗಬೇಕು. ಪರೀಕ್ಷೆಯ ಸಮಯದಲ್ಲಿ ನಿರಾಳ ಭಾವ ಮಕ್ಕಳಲ್ಲಿರಬೇಕು. ಇನ್ನೇನು ಪರೀಕ್ಷೆ ನಾಳೆಗೆ ಆರಂಭವಾಗುತ್ತದೆ ಎಂದರೆ ಮಕ್ಕಳು ಪರೀಕ್ಷೆಗೆ ಓದುವ ಕೆಲಸವನ್ನು ನಿಲ್ಲಿಸಿ ಆರಾಮದಾಯಕ ಮನಸ್ಥಿತಿಯನ್ನು ಹೊಂದಬೇಕು. ಪರೀಕ್ಷೆಗೆ ಬೇಕಾದ ಹಾಲ್ ಟಿಕೆಟ್, ಪೆನ್ನುಗಳು, ಜಾಮಿಟ್ರಿ ಬಾಕ್ಸ್ ಮುಂತಾದ ಪರಿಕರಗಳನ್ನು ಹಿಂದಿನ ದಿನ ಮಧ್ಯಾಹ್ನದ ನಂತರ ಹೊಂದಿಸಿಟ್ಟುಕೊಳ್ಳಬೇಕು. ಅತ್ಯಂತ ನಿರಾಳ ಭಾವದಿಂದ ಆಹಾರವನ್ನು ಸೇವಿಸಿ ಒಂದೊಳ್ಳೆಯ ಹರಟೆಯನ್ನು ಪಾಲಕರೊಂದಿಗೆ ಪೂರೈಸಿ ಬೇಗನೆ ನಿದ್ರಿಸಲು ಅನುವಾಗಬೇಕು. ಒಂದೊಳ್ಳೆಯ ನಿದ್ರೆ ಮಗುವಿನ ಮೆದುಳಿನಲ್ಲಿರುವ ನ್ಯೂರೋ ಟ್ರಾನ್ಸ ಮಿಟರ್ಗಳನ್ನು ಜಾಗೃತವಾಗಿಸಿ ಸಂಯೋಜಿಸಲ್ಪಡುತ್ತವೆ. ಮರುದಿನ ಮುಂಜಾನೆ ಸ್ವಸ್ಥ ಚಿತ್ತರಾಗಿ ಏಳುವ ಮಕ್ಕಳು





ದೈನಂದಿನ ಕರ್ಮಗಳನ್ನು ಪೂರೈಸಿ ತಮ್ಮ ಆಯ್ಕೆಯ ತಿಂಡಿ-ಯನ್ನು ಸೇವಿಸಿದಾಗ ಅವರಲ್ಲಿ ಸಂತೃಪ್ತಿ ಮನೆ ಮಾಡುತ್ತದೆ. ಇಂತಹ ಸಂತೃಪ್ತ ಮನಸ್ಥಿತಿಯಲ್ಲಿ ಮಕ್ಕಳು ಪರೀಕ್ಷೆಯ ಹಾಲ್ಗೆ ತೆರಳಿದಾಗ

ಒಳ್ಳೆಯ ಮನಸ್ಥಿತಿಯು ಅವರಿಗೆ ಪರೀಕ್ಷೆಯನ್ನು ಎದು-ರಿಸಲು ಸಹಾಯ ಮಾಡುತ್ತದೆ.

ಮಕ್ಕಳು ಪರೀಕ್ಷೆಯ ಸಮಯದಲ್ಲಿ ಇದುವರೆಗೂ ಮಾಡಿಕೊಂಡು ಬಂದಿರುವ ಕೆಲಸಗಳಿಂದ ಅವರಿಗೆ ವಿನಾಯಿತಿ



ನೀಡಬೇಕು. ಒತ್ತಡ ರಹಿತರಾಗಿ ಮಕ್ಕಳು ಓದಿಕೊಳ್ಳಲು ಇದು ತುಸುಮಟ್ಟಿಗೆ ಒಳ್ಳೆಯದು. ಪರೀಕ್ಷೆಯ ಸಮಯದಲ್ಲಿ ಮಕ್ಕಳು ಆತಂಕ ರಹಿತರಾಗಿರುವುದು ಹೆಚ್ಚು ಲಾಭದಾಯಕ. ಪಾಲಕರೊಂದಿಗೆ ಮಾತನಾಡುತ್ತಾ, ಒಡನಾಡುತ್ತಾ ಮಕ್ಕಳು ತಮ್ಮ ಪರೀಕ್ಷಾ ಪರಿಕರಗಳನ್ನು ಹೊಂದಿಸಿಕೊಂಡು ಅಲ್ಲಿ ಹಾಲ್ ಟಿಕೆಟ್ ನಂಬರ್ ಎಂಟ್ರಿ ಮಾಡುವುದರಿಂದ ಹಿಡಿದು ಹೇಗೆ ಬರೆಯಬೇಕು ಎಂಬುದರ ಕುರಿತು ಸೂಕ್ಷ್ಮವಾಗಿ ಪಾಲಕರೊಂದಿಗೆ ಮಾತನಾಡುವುದು ಮರುದಿನದ ತಯಾರಿಗೆ ಒಳ್ಳೆಯ ಆರಂಭವನ್ನು ಕೊಡುತ್ತದೆ. ಪಾಲಕರ ವ್ಯಂಗ್ಯ ಮಾತುಗಳು ಮಗುವಿನಲ್ಲಿ ನಿರಾಶೆಯನ್ನು, ಹತಾಶೆಯನ್ನು ಮೂಡಿಸಬಹುದು ಯಾವಾಗಲೂ ಪಾಲಕರು ಮುಂದಿನ ಯೋಜನೆಯ ಕುರಿತು ಮಾತನಾಡಬೇಕು. ಮಕ್ಕಳ ವಿಚಾರಗಳನ್ನು ನಿಯಂತ್ರಿಸುವುದಲ್ಲ, ಪ್ರೋತ್ಸಾಹಿಸುವುದರ ಮೂಲಕ ಅವರಿಗೆ ಉತ್ತೇಜಿಸಬೇಕು.

ಲೇಖನ
– ವೀಣಾ ಹೇಮಂತಗೌಡ ಪಾಟೀಲ್.
ಮುಂಡರಗಿ
ಗದಗ ಜಿಲ್ಲೆ





## ರಾಷ್ಟ್ರದ ಅಭಿವೃದ್ಧಿಯಲ್ಲಿ ಛಾಯಾಗ್ರಾಹಕರ ಕೊಡುಗೆ ಅನನ್ಯ

ಕಲಬುರಗಿ: ಒಂದು ಚಿತ್ರ ಸಾವಿರ ಶಬ್ದಗಳಿಗೆ ಸಮಾನ. ವ್ಯಕ್ತಿ ಹಾಗೂ ಯಾವುದೇ ವರ್ಣಿಸಲಾಗದ ದೃಶ್ಯವನ್ನು ನೈಜವಾಗಿ ಸೆರಹಿಡಿಯುವ ಕಲೆ ಸಾಮಾನ್ಯವಾದುದಲ್ಲ. ಇದರಿಂದ ಆ ಸಂದರ್ಭ ಖುದ್ದಾಗಿ ವೀಕ್ಷಿಸಿದ ಅನುಭವ ಉಂಟಾಗುವಂತೆ ಮಾಡಿ, ಅಲ್ಲಿನ ಸ್ಥಿತಿ-ಗತಿಯ ನೈಜ ಚಿತ್ರಣ ನೀಡುವ ಕಾರ್ಯ ನಿರ್ವಹಿಸುವ ಛಾಯಾಗ್ರಾಹಕರ ಕೊಡುಗೆ ರಾಷ್ಟ್ರದ ಅಭಿವೃದ್ಧಿಯಲ್ಲಿ ಅನನ್ಯವಾಗಿದೆ ಎಂದು ಹಿರಿಯ ಛಾಯಾಗ್ರಾಹಕ ಬಸವರಾಜ ವೈ. ತೊನಸಳ್ಳಿ ಹೇಳಿದರು. ನಗರದ ನೆಹರು ಗಂಜ್ ಬಸ್ ನಿಲ್ದಾಣ ಸಮೀಪವಿರುವ 'ನ್ಯೂ ದೇವಿ ಫೋಟೋ ಸ್ಟುಡಿಯೋ'ದಲ್ಲಿ 'ಬಸವೇಶ್ವರ ಸಮಾಜ ಸೇವಾ ಬಳಗ'ದ ವತಿಯಿಂದ ಬುಧವಾರ ಸಂಜೆ ಜರುಗಿದ '187ನೇ ವಿಶ್ವ ಛಾಯಾಗ್ರಾಹಕರ ದಿನಾಚರಣೆ'ಯಲ್ಲಿ ಸತ್ಕಾರ ಸ್ವೀಕರಿಸಿ ಅವರು ಮಾತನಾಡಿದರು.

ಬಳಗದ ಅಧ್ಯಕ್ಷ ಹಾಗೂ ಉಪನ್ಯಾಸಕ ಎಚ್.ಬಿ.ಪಾಟೀಲ್ ಮಾತನಾಡಿ, ಕ್ಯಾಮರಾ ಮಾನವನ ಕಣ್ಣುಗಳಿಂದ್ದಂತೆ. ಕೆಲವು ಸಲ ನಾವೂ ನೋಡಿದ್ದು ನೆನಪಿಗೆ ಬರದಿದ್ದರೂ, ಕ್ಯಾಮಾರಾವು ಶಾಶ್ವತ ದಾಖಲೆಯನ್ನು ಒದಗಿಸುತ್ತದೆ. ಪ್ರಸ್ತುತವಾಗಿ ಸ್ಮಾರ್ಟಫೋನ್ ಯುಗದಲ್ಲಿ ಛಾಯಾಗ್ರಾಹಕರು ತೀವ್ರವಾದ ಸ್ಪರ್ಧೆಯನ್ನು ಎದುರಿಸಿ ಕಾರ್ಯನಿರ್ವಹಿಸಬೇಕಾಗಿರುವುದು ಒಂದು ಸವಾಲಿನ ಕಾರ್ಯವಾಗಿದೆ. ಛಾಯಾಗ್ರಾಹಕರಿಗೆ ಸರ್ಕಾರದಿಂದ ಸೌಲಭ್ಯಗಳು ದೊರೆಯಬೇಕಾಗಿವೆ ಎಂದರು.

ಕಾರ್ಯಕ್ರಮದಲ್ಲಿ ಸಮಾಜ ಸೇವಕ ಶಿವಯೋಗೆಪಾ ಎಸ್.ಬಿರಾದಾರ, ಪ್ರಮುಖರಾದ ಶಾಂತಪ್ಪ ಜಮಾದಾರ, ಮಹೇಶ ಕಲ್ಲಹಂಗರಗಾ, ಜಮಾಲುದ್ದೀನ್ ಶೇಖ್, ವಿನೋದ ಕಲಬುರ್ಗಿ, ರಮೇಶ್ ಹರವಾಳ, ಇಸ್ಮಾಯಿಲ್ ಪಟೇಲ್ ಸೇರಿದಂತೆ ಇನ್ನಿತರರಿದ್ದರು.

## ರಾಷ್ಟ್ರೀಯ ಏಕತೆಗೆ ಸದ್ಭಾವನೆ ಅಗತ್ಯ

ಕಲಬುರಗಿ : ಎಲ್ಲಾ ಧರ್ಮಗಳ ಭಾರತೀಯರ ನಡುವೆ ರಾಷ್ಟ್ರೀಯ ಏಕತೆ, ಶಾಂತಿ, ಸಹಾನುಭೂತಿ ಮತ್ತು ಕೋಮು ಸೌಹಾರ್ದತೆಯನ್ನು ಉತ್ತೇಜಿಸಲು ಸದ್ಭಾವನಾ ಅಗತ್ಯವಾಗಿದೆ. ವಿವಿಧತೆಯಲ್ಲಿ ಏಕತೆ ಹೊಂದಿರುವ ಭಾರತೀಯರಲ್ಲಿ ಪರಸ್ಪರ ನಂಬಿಕೆ ಹಾಗೂ ಸಹೋದರತ್ವವನ್ನು ಗಟ್ಟಿಗೊಳಿಸಲಾಗುತ್ತದೆ. ಎಂದು ಉಪನ್ಯಾಸಕ ಎಚ್.ಬಿ.ಪಾಟೀಲ್ ಹೇಳಿದರು.

ನಗರದ ಆಳಂದ ರಸ್ತೆಯ ಸಂತೋಷ ಕಾಲನಿ ಕ್ರಾಸ್ ಸಮೀಪದ 'ರಿಪಬ್ಲಿಕ್ ಸ್ಪೋಕನ್ ಇಂಗ್ಲೀಷ್ ಅಕಾಡೆಮಿ'ಯಲ್ಲಿ 'ಬಸವೇಶ್ವರ ಸಮಾಜ ಸೇವಾ ಬಳಗ'ದ ವತಿಯಿಂದ ಜರುಗಿದ 'ರಾಷ್ಟ್ರೀಯ ಸದ್ಭಾವನಾ ದಿನಾಚರಣೆ'ಯಲ್ಲಿ ಪ್ರತಿಜ್ಞೆ ವಿಧಿ ಬೋಧಿಸಿ, ನಂತರ ಅವರು ಮಾತನಾಡುತ್ತಿದ್ದರು.

ಸದ್ಭಾವನಾ ದಿನದ ಪ್ರಮುಖ ವಿಷಯವೆಂದರೆ, ವಿವಿಧ ನಂಬಿಕೆಗಳು ಮತ್ತು ಸಂಸ್ಕೃತಿಗಳ ಜನರಲ್ಲಿ ರಾಷ್ಟ್ರೀಯ ಏಕತೆ ತರುವುದಾಗಿದೆ. ಎಲ್ಲರಲ್ಲಿ ಸದ್ಭಾವನಾ ಗುಣ ಬೆಳೆಸಿಕೊಳ್ಳಬೇಕಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಸಂಸ್ಥೆಯ ಅಧ್ಯಕ್ಷ ದತ್ತು ಹಡಪದ, ಸಮಾಜ ಸೇವಕರಾದ ಡಾ.ರಾಜಶೇಖರ ಪಾಟೀಲ್, ಶಿವಯೋಗೆಪ್ಪಾ ಎಸ್.ಬಿರಾದಾರ, ದಿನೇಶ್ ಮಿಶ್ರಾ, ಪಾರ್ವತಿ ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.

## ಉರ್ದು ಶಿಕ್ಷಕರ ಹುದ್ದೆಗಳ ನೇಮಕಾತಿಗೆ ಶಾಸಕಿ ಒತ್ತಾಯ

ಕಲಬುರಗಿ: ಇತ್ತೀಚೆಗೆ ಹೊರಡಿಸಲಾದ ಪ್ರೌಢಶಾಲಾ ಶಿಕ್ಷಕರ ನೇಮಕಾತಿ ಅಧಿಸೂಚನೆಯಲ್ಲಿ ಉರ್ದು-ಮಾಧ್ಯಮ ಬೋಧನಾ ಹುದ್ದೆಗಳನ್ನು ಸೇರಿಸುವಂತೆ ಕಲಬುರಗಿ ಉತ್ತರ ಶಾಸಕಿ ಮತ್ತು ಕೆಎಸ್ಐಸಿ ಅಧ್ಯಕ್ಷೆ ಕನೀಜ್ ಫಾತಿಮಾ ಕರ್ನಾಟಕ ಸರ್ಕಾರವನ್ನು ಒತ್ತಾಯಿಸಿದ್ದಾರೆ', ನೇಮಕಾತಿ ಪ್ರಕ್ರಿಯೆಯಿಂದ



ಉರ್ದು-ಮಾಧ್ಯಮ ಶಾಲೆಗಳನ್ನು ಹೊರಗಿಡುವ ಬಗ್ಗೆ ಕಳವಳ ವ್ಯಕ್ತಪಡಿಸಿದ್ದಾರೆ. ಕಲಬುರಗಿ ಉತ್ತರ ಶಾಸಕಿ ಮತ್ತು ಕೆಎಸ್ಐಸಿ ಅಧ್ಯಕ್ಷೆ ಕನೀಜ್ ಫಾತಿಮಾ ಅವರು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಜ್ಞಾಪಕ ಪತ್ರವನ್ನು ಸಲ್ಲಿಸಿದ್ದಾರೆ, ಕಲಬುರಗಿ ಮತ್ತು ಕಲ್ಯಾಣ ಕರ್ನಾಟಕ ಪ್ರದೇಶದಾದ್ಯಂತ ಉರ್ದು-ಮಾಧ್ಯಮ ಶಾಲೆಗಳು ಮತ್ತು ಬೋಧನಾ ಉದ್ಯೋಗವನ್ನು ಬಯಸುವ ಸಾವಿರಾರು ಅರ್ಹ ಅಭ್ಯರ್ಥಿಗಳು ಎದುರಿಸುತ್ತಿರುವ ತೊಂದರೆಗಳನ್ನು ಎತ್ತಿ ತೋರಿಸಿದ್ದಾರೆ.ಶಾಲಾ ಶಿಕ್ಷಣ ಇಲಾಖೆಯು ಕಲ್ಯಾಣ ಕರ್ನಾಟಕ ಸ್ಥಳೀಯ ಕೇಡಗೆ 100 ಪ್ರತಿಶತ ಕೋಟಾದಡಿಯಲ್ಲಿ ಸಹಾಯಕ ಮಾಸ್ಟರ್ ಗ್ರೇಡ್-1 ಮತ್ತು ದೈಹಿಕ ಶಿಕ್ಷಣ ಗ್ರೇಡ್-2 ವಿಭಾಗಗಳ ಅಡಿಯಲ್ಲಿ 2,051 ಪ್ರೌಢಶಾಲಾ ಶಿಕ್ಷಕರ ನೇಮಕಾತಿಗೆ ಅಧಿಸೂಚನೆ ಹೊರಡಿಸಿದೆ. ಜೈವಿಕ ವಿಜ್ಞಾನ, ಸಮಾಜ ವಿಜ್ಞಾನ, ಭಾಷಾ ಶಿಕ್ಷಕರು ಮತ್ತು ದೈಹಿಕ ಶಿಕ್ಷಣದಂತಹ ವಿಷಯಗಳಲ್ಲಿ ಕನ್ನಡ ಮತ್ತು ಇಂಗ್ಲಿಷ್-ಮಾಧ್ಯಮ ಶಾಲೆಗಳಿಗೆ ಬೋಧನಾ ಹುದ್ದೆಗಳನ್ನು ಅಧಿಸೂಚನೆಯಲ್ಲಿ ಸೇರಿಸಲಾಗಿದೆ.

ನೇಮಕಾತಿ ಅಧಿಸೂಚನೆಯ ಪ್ರಕಾರ, ಒಟ್ಟು 2,051 ಹುದ್ದೆಗಳಲ್ಲಿ 1,789 ಸಹಾಯಕ ಮಾಸ್ಟರ್ ಹುದ್ದೆಗಳು ಮತ್ತು 262 ದೈಹಿಕ ಶಿಕ್ಷಣ ಶಿಕ್ಷಕರ ಹುದ್ದೆಗಳು. ಕಲಬುರಗಿ ಉತ್ತರ ಶಾಸಕಿ ಮತ್ತು ಕೆಎಸ್ಐಸಿ ಅಧ್ಯಕ್ಷೆ ಕನೀಜ್ ಫಾತಿಮಾ, ಉರ್ದು-ಮಾಧ್ಯಮ ಬೋಧನಾ ಹುದ್ದೆಗಳ ಅನುಪಸ್ಥಿತಿಯು ಗಂಭೀರ ಕಳವಳಕಾರಿಯಾಗಿದೆ, ವಿಶೇಷವಾಗಿ ಈ ಪ್ರದೇಶದಲ್ಲಿ ಹಲವಾರು ಸರ್ಕಾರಿ ಉರ್ದು-ಮಾಧ್ಯಮ ಪ್ರೌಢಶಾಲೆಗಳು ಈಗಾಗಲೇ ಶಿಕ್ಷಕರ ಕೊರತೆಯೊಂದಿಗೆ ಕಾರ್ಯನಿರ್ವಹಿಸುತ್ತಿವೆ

ಸರ್ಕಾರಿ ಉರ್ದು ಮಾಧ್ಯಮ ಪ್ರೌಢಶಾಲೆಗಳು ಶಿಕ್ಷಕರ ತೀವ್ರ ಕೊರತೆಯನ್ನು ಎದುರಿಸುತ್ತಿವೆ, ಇದು ವಿದ್ಯಾರ್ಥಿಗಳಿಗೆ ನೀಡಲಾಗುವ ಶಿಕ್ಷಣದ ಗುಣಮಟ್ಟದ ಮೇಲೆ ನೇರವಾಗಿ ಪರಿಣಾಮ ಬೀರುತ್ತದೆ ಎಂದು ಅವರು ಒತ್ತಿ ಹೇಳಿದರು. ಉರ್ದು ಮಾಧ್ಯಮ ಹುದ್ದೆಗಳನ್ನು ಸೇರಿಸುವುದ-ರಿಂದ ಈ ಶಾಲೆಗಳಲ್ಲಿ ಶಿಕ್ಷಕರ ಕೊರತೆಯನ್ನು ನೀಗಿಸುವುದಲ್ಲದೆ, ಅರ್ಹ ಉರ್ದು ಮಾಧ್ಯಮ ಬಿ.ಎಡ್ ಪದವೀಧರರು ಮತ್ತು ಈ ಪ್ರದೇಶದ ಅರ್ಹ ಉರ್ದು ಮಾಧ್ಯಮ ಬಿ.ಎಡ್ ಪದವೀಧರರು ಮತ್ತು ಉದ್ಯೋಗ ಆಕಾಂಕ್ಷಿಗಳಿಗೆ ನ್ಯಾಯಯುತ ಅವಕಾಶವನ್ನು ಒದಗಿಸುತ್ತದೆ ಎಂದು ಅವರು ಒತ್ತಿ ಹೇಳಿದರು.

## ವೈವಾಹಿಕ ಕಾನೂನು,ಘನತೆ ಭಾವನಾತ್ಮಕ ಯೋಗಕ್ಷೇಮಕ್ಕೆ ಸಂಬಂಧ: ನ್ಯಾಮೂ ಕೆ. ವಿ. ಅರವಿಂದ್

ಕಲಬುರಗಿ: ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದ (ಸಿಯುಕೆ) ಕಾನೂನು ವಿಭಾಗವು, ಮರತೂರಿನ ವಿಜ್ಞಾನೇಶ್ವರ ಪ್ರತಿಷ್ಠಾನ ಟ್ರಸ್ಟ್ ಸಹಯೋಗದೊಂದಿಗೆ, "ಸಹಜೀವನ ವಿಕಸನ: ವಿವಾಹದಲ್ಲಿ ಪಾವಿತ್ರ್ಯ, ಕಾನೂನುಬದ್ಧತೆ ಮತ್ತು ಸಾಮಾಜಿಕ ಆಯಾಮಗಳು" ಎಂಬ ವಿಷಯದ ಕು-ರಿತು ಆಯೋಜಿಸಿದ್ದ ಒಂದು ದಿನದ ರಾಷ್ಟ್ರೀಯ ವಿಚಾರ ಸಂಕಿರಣದ ಸಮಾರೋಪ ಸಮಾರಂಭ ನಡೆಯಿತು.



ಸಮಾರೋಪ ಸಮಾರಂಭದಲ್ಲಿ ಮುಖ್ಯ ಅತಿಥಿ-ಯಾಗಿ ಕರ್ನಾಟಕ ಹೈಕೋರ್ಟನ ನ್ಯಾಯಮೂರ್ತಿ ಕೆ. ವಿ. ಅರವಿಂದ್ ಅವರು ಭಾಗವಹಿಸಿ ಮಾತನಾಡಿದರು. "ವೈವಾಹಿಕ ಕಾನೂನು ಕೇವಲ ಕಾನೂನಿನ ವಿಭಾಗಗಳು, ಉಪ-ವಿಭಾಗಗಳು ಹಾಗೂ ನಿಬಂಧನೆಗಳಿಗೆ ಸೀಮಿತವಾಗಿಲ್ಲ, ಅದು ಮನುಷ್ಯರ ಬದುಕು, ದಾಂಪತ್ಯದ ಒಡನಾಟ, ವಾತ್ಸಲ್ಯ, ಘನತೆಯ ರಕ್ಷಣೆ, ಮಕ್ಕಳ ಹಿತವನ್ನು, ಭಾವನಾತ್ಮಕ ನೋವು ಹಾಗೂ ಆರ್ಥಿಕ ಅವಲಂಬನೆಯಂತಹ ಮಾನವೀಯ ಆಯಾಮಗಳನ್ನು ಒಳಗೊಂಡಿದೆ." ಎಂದು ಹೇಳಿದರು.

ವೈವಾಹಿಕ ಸಂಬಂಧಗಳು ಮತ್ತು ವಿವಾದಗಳ ಬದಲಾಗುತ್ತಿರುವ ಸ್ವರೂಪವನ್ನು ಪ್ರಸ್ತಾಪಿಸಿದ ನ್ಯಾಯಮೂರ್ತಿ ಕೆ. ವಿ. ಅರವಿಂದ್ ಅವರು, ಹಿಂದೂ ವಿವಾಹವು ಸಾಂಪ್ರದಾಯಿಕವಾಗಿ 'ಸಂಸ್ಕಾರ'ವೆಂದು ಪರಿಗಣಿಸಲ್ಪಟ್ಟಿದ್ದು, ಅದು ಕೇವಲ ಕಾನೂನು ಬಾಂಧವ್ಯವಲ್ಲದೆ, ವ್ಯಕ್ತಿಗಳು ಮತ್ತು ಕುಟುಂಬಗಳ ನಡುವಿನ ಸಾಮಾಜಿಕ, ಸಾಂಸ್ಕೃತಿಕ ಹಾಗೂ ನೈತಿಕ ಬದ್ಧತೆಯ ಪ್ರತೀಕವಾಗಿದೆ ಎಂದು ಹೇಳಿದರು.

ವೈವಾಹಿಕ ವಿವಾದಗಳಲ್ಲಿ ಸಮನ್ವಯ ಮತ್ತು ಮಧ್ಯಸ್ಥಿಕೆಯ ಮೂಲಕ ಕುಟುಂಬಗಳನ್ನು ಮತ್ತೆ ಒಂದುಗೂಡಿಸುವಲ್ಲಿ ಬೆಂಗಳೂರಿನ ಮಧ್ಯಸ್ಥಿಕೆ ಕೇಂದ್ರ ವಹಿಸುತ್ತಿರುವ ಮಹತ್ವದ ಪಾತ್ರವನ್ನು ಅವರು ಉಲ್ಲೇಖಿಸಿದರು. ವೈವಾಹಿಕ ವಿಷಯಗಳಲ್ಲಿ ವಕೀಲರು ಮಹತ್ವದ ಜವಾಬ್ದಾರಿಯನ್ನು ಹೊಂದಿದ್ದು, ಕೇವಲ ತೀರ್ಪು ಪಡೆಯುವುದಕ್ಕೆ ಸೀಮಿತವಾಗದೆ, ಸಾಧ್ಯವಾದಲ್ಲೆಲ್ಲಾ ಸಮನ್ವಯ, ಸಂಬಂಧಗಳ ಪುನಃಸ್ಥಾಪನೆ ಮತ್ತು ಕುಟುಂಬಗಳ ಯೋಗಕ್ಷೇಮಕ್ಕೆ ಆದ್ಯತೆ ನೀಡಿ ಕಾರ್ಯನಿರ್ವಹಿಸಬೇಕು ಎಂದು ಅವರು ಹೇಳಿದರು.

ಸಮಾರೋಪ ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಸಿಯುಕೆಯ ಕುಲಪತಿ ಪ್ರೊ. ಬಟ್ಟು ಸತ್ಯನಾರಾಯಣ ಅವರು, ಕಾನೂನು ವೃತ್ತಿಯಲ್ಲಿ, ವಿಶೇಷವಾಗಿ ವೈವಾಹಿಕ ವಿವಾದಗಳನ್ನು ನಿರ್ವಹಿಸುವ ಸಂದರ್ಭದಲ್ಲಿ ನೈತಿ-ಕತೆ, ಮಾನವೀಯತೆ ಮತ್ತು ಸೂಕ್ಷ್ಮತೆಯ ಮಹತ್ವವನ್ನು ಹೇಳಿದರು. ವೈವಾಹಿಕ ಪ್ರಕರಣಗಳು ಇತರ ಹಲವು ಬಗೆಯ ಮೊಕದ್ದಮೆಗಳಿಗಿಂತ ಭಿನ್ನವಾಗಿದ್ದು, ಅವು ಆಳವಾದ ವೈಯಕ್ತಿಕ ಸಂಬಂಧಗಳು, ಭಾವನೆಗಳು ಹಾಗೂ ಕುಟುಂಬಗಳ ಭವಿಷ್ಯವನ್ನು ಒಳಗೊಂಡಿರುತ್ತವೆ ಎಂದು ಹೇಳಿದರು.ಮಕ್ಕಳ ಪಾಲನೆ ಮತ್ತು ಪೋಷಣೆಯ ಸೂಕ್ಷ್ಮ ವಿಷಯದ ಕುರಿತು ಮಾತನಾಡಿದ ಅವರು, ಪೋಷಕರ ಬೇರ್ಪಡುವಿಕೆಯಲ್ಲಿ ಯಾವುದೇ ತಪ್ಪಿಲ್ಲದಿದ್ದರೂ ಮಕ್ಕಳು ಅದರ ಪರಿಣಾಮವನ್ನು ಅನಿರೀಕ್ಷಿತವಾಗಿ ಎದುರಿಸಬೇಕಾಗುತ್ತದೆ ಎಂದು ಹೇಳಿದರು. ವೈವಾಹಿಕ ವಿವಾದಗಳಿಗೆ ಸಂಬಂಧಿಸಿದ ನಿರ್ಧಾರಗಳಲ್ಲಿ ಮಕ್ಕಳ ಕಲ್ಯಾಣ, ಘನತೆ ಮತ್ತು ಭಾವನಾತ್ಮಕ ಯೋಗಕ್ಷೇಮಕ್ಕೆ ಅತ್ಯುನ್ನತ ಆದ್ಯತೆ ನೀಡಬೇಕು ಎಂದು ಅವರು ಹೇಳಿದರು.

ಈ ಸಂದರ್ಭದಲ್ಲಿ ಸಂಶೋಧನಾ ವಿದ್ಯಾರ್ಥಿಗಳಿಂದ ಹಾಗೂ ಪ್ರಾಧ್ಯಾಪಕರಿಂದ ವಿವಿಧ ವಿಷಯಗಳ ಮೇಲೆ ಪ್ರಬಂಧ ಮಂಡನೆ ಹಾಗೂ ವಿವಿಧ ನುರಿತ ಸಂಪನ್ಮೂಲ ವ್ಯಕ್ತಿಗಳಿಂದ ವಿಶೇಷ ಭಾಷಣ, ಚರ್ಚೆ ಮತ್ತು ಸಂವಾದ ಕಾರ್ಯಕ್ರಮ ನಡೆಯಿತು.

ಸಮಾರೋಪ ಸಮಾರಂಭದಲ್ಲಿ ಕಾನೂನು ಅಧ್ಯಯನ ನಿಕಾಯದ ಡೀನ್ ಪ್ರೊ. ಬಸವರಾಜ ಎಂ. ಕುಬಕಡ್ಡಿ, ಕಾನೂನು ವಿಭಾಗದ ಮುಖ್ಯಸ್ಥ ಡಾ. ಅನಂತ್ ಡಿ. ಚಿಂಚುರೆ, ವಿಜ್ಞಾನೇಶ್ವರ ಪ್ರತಿಷ್ಠಾನ ಟ್ರಸ್ಟನ ಟ್ರಸ್ಟಿ ಮಹಾದೇವಯ್ಯ ಕರದಳ್ಳಿ, ವಿಚಾರ ಸಂಕಿರಣದ ಸಂಚಾಲಕಿ ಡಾ. ರೇಣುಕಾ ಎಸ್. ಗುಬ್ಬೇವಾಡ್ ಸೇರಿದಂತೆ ಕಾನೂನು ವಿಭಾಗದ ಪ್ರಾಧ್ಯಾಪಕರು, ಸಂಶೋಧನಾ ವಿದ್ಯಾರ್ಥಿಗಳು ಹಾಗೂ ವಿವಿಧ ಕಾಲೇಜಿನ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಪೂಜ್ಯ ಡಾ.ಅಪ್ಪ ದೂರದೃಷ್ಟಿಯ ಶಿಕ್ಷಣ ನಾಯಕ



ಕಲಬುರಗಿ: ಪೂಜ್ಯ ಡಾ. ಶರಣಬಸವಪ್ಪ ಅಪ್ಪ ಅವರನ್ನು "ವಿಜ್ಞಾನ ಮತ್ತು ತಂತ್ರಜ್ಞಾನವನ್ನು ದಾಸೋಹದ ಮೂಲಕ ಸಮಾಜದ ಅಭಿವೃದ್ಧಿಗೆ ಬಳಸಿದ ದೂರದೃಷ್ಟಿಯ ಶಿಕ್ಷಣ ನಾಯಕ" ಎಂದು ಶರಣಬಸವೇಶ್ವರ ವಿಜ್ಞಾನ ಮಹಾವಿದ್ಯಾಲಯದ ಪ್ರಾಚಾರ್ಯ ಡಾ.ರಾಮಕೃಷ್ಣರೆಡ್ಡಿ ಹೇಳಿದರು.

ಅಖಿಲ ಭಾರತ ಶಿವಾನುಭವ ಮಂಟಪ ಶರಣಬಸವೇಶ್ವರ ದೇವಸ್ಥಾನದಲ್ಲಿ ಶ್ರಾವಣ ಮಾಸ 40 ದಿನಗಳ ಉಪನ್ಯಾಸ ಮಾಲಿಕೆಯಲ್ಲಿ ಪೂಜ್ಯ ಡಾ.ಶರಣಬಸವಪ್ಪ ಅಪ್ಪ ಅವರ ವಿಜ್ಞಾನ ಮತ್ತು ತಂತ್ರಜ್ಞಾನ ದಾಸೋಹ ಎಂಬ ವಿಷಯ ಕುರಿತು ಮಾತನಾಡಿದರು.

ಪೂಜ್ಯ ಡಾ. ಶರಣಬಸವಪ್ಪ ಅಪ್ಪ ಅವರು ಶಿಕ್ಷಣ, ಸಂಸ್ಕೃತಿ, ಕಲೆ, ಸಂಶೋಧನೆ ಹಾಗೂ ಸಾಮಾಜಿಕ ಸೇವೆಯನ್ನು ಸಮನ್ವಯಗೊಳಿಸಿದ ದೂರದೃಷ್ಟಿಯ ಶಿಕ್ಷಣತಜ್ಞರಾಗಿದ್ದರು.

ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಮೂಲಕ ವಿಜ್ಞಾನ ಶಿಕ್ಷಣಕ್ಕೆ ವಿಶೇಷ ಪ್ರೋತ್ಸಾಹ ನೀಡಿದರು. 1956ರಲ್ಲಿ ಶರಣಬಸವೇಶ್ವರ ವಿಜ್ಞಾನ ಕಾಲೇಜು ಆರಂಭವಾಗಿದ್ದು, ಇಂದು ಅದು ವಿವಿಧ ವಿಜ್ಞಾನ ವಿಷಯಗಳಲ್ಲಿ ಉನ್ನತ ಶಿಕ್ಷಣ ನೀಡುವ ಸಂಸ್ಥೆಯಾಗಿ ಕಾರ್ಯನಿರ್ವಹಿಸುತ್ತಿದೆ. ಅಪ್ಪನವರ ದೃಷ್ಟಿಯಲ್ಲಿ ಶಿಕ್ಷಣವು ಕೇವಲ ಪದವಿ ಪಡೆಯುವ ಸಾಧನವಲ್ಲ, ಅದು ವಿದ್ಯಾರ್ಥಿಗಳಲ್ಲಿ ವೈಜ್ಞಾನಿಕ ಮನೋಭಾವ, ಪ್ರಶ್ನಿಸುವ ಗುಣ, ಸಂಶೋಧನಾ ಆಸಕ್ತಿ ಮತ್ತು ಸಮಸ್ಯೆ ಪರಿಹರಿಸುವ ಸಾಮರ್ಥ್ಯ ಬೆಳೆಸುವ ಸಾಧನವಾಗಿದೆ.ಆ ಕಾಲದಲ್ಲಿ ಉತ್ತರ ಕರ್ನಾಟಕದ ಅನೇಕ ಪ್ರದೇಶಗಳಲ್ಲಿ ಆಧುನಿಕ ತಾಂತ್ರಿಕ ಶಿಕ್ಷಣದ ಅವಕಾಶಗಳು ಸೀಮಿತವಾಗಿದ್ದವು. ಇಂತಹ ಸಂದರ್ಭದಲ್ಲಿ ಆಧುನಿಕ ತಂತ್ರಜ್ಞಾನಾಧಾರಿತ ಕೋರ್ಸಗಳನ್ನು ಸಂಸ್ಥೆಗಳಲ್ಲಿ ಪರಿಚಯಿಸುವ ಮೂಲಕ ವಿದ್ಯಾರ್ಥಿಗಳಿಗೆ ಹೊಸ ಅವಕಾಶಗಳನ್ನು ಕಲ್ಪಿಸಿದರು.

ವಿಜ್ಞಾನ ಶಿಕ್ಷಣದ ಮುಂದುವರಿದ ಹಂತವಾಗಿ ಇಂಜಿನಿಯರಿಂಗ್ ಮತ್ತು ತಾಂತ್ರಿಕ ಶಿಕ್ಷಣಕ್ಕೂ ಒತ್ತು ನೀಡಿದರು. ಅಪ್ಪಾ ಇನಸ್ಟಿಟ್ಯೂಟ್ ಆಫ್ ಎಂಜಿನಿಯ-ರಿಂಗ್ ಅಂಡ್ ಟೆಕ್ನಾಲಜಿ, ಗೋದುತಾಯಿ ಮಹಿಳಾ ಎಂಜಿನಿಯರಿಂಗ್ ಕಾಲೇಜ್, ಬೀದರನಲ್ಲಿ ಲಿಂಗರಾಜಪ್ಪ ಎಂಜಿನಿಯರಿಂಗ್, ಸುರಪುರದಲ್ಲಿ ವೀರಪ್ಪ ನಿಷ್ಠಿ ಎಂಜಿನಿಯರಿಂಗ ಕಾಲೇಜ್ ನಂತರ ಶರಣಬಸವ ವಿಶ್ವವಿದ್ಯಾಲಯವು ಇಂಜಿನಿಯರಿಂಗ್ ಮತ್ತು ತಂತ್ರಜ್ಞಾನ ಕ್ಷೇತ್ರಗಳಲ್ಲಿ ಸ್ನಾತಕ, ಸ್ನಾತಕೋತ್ತರ ಹಾಗೂ ಪಿಎಚ್.ಡಿ. ಕೋರ್ಸುಗಳನ್ನು ಆರಂಭಿಸಿ ಈ ಭಾಗವು ತಾಂತ್ರಿಕವಾಗಿ ಬೆಳೆಸಿದರು ಎಂದರು

## ಜಿಲೆಟಿನ್ ಸ್ಫೋಟ: ಚಿಕಿತ್ಸೆ ಫಲಿಸದೆ ಮತ್ತೊಬ್ಬ ಪುತ್ರ ಸಾವು

ಆಳಂದ: ತಾಲೂಕಿನ ಮಂಟಕಿ ತಾಂಡಾದಲ್ಲಿ ಕುಟುಂಬ ಕಲಹದ ನಡುವೆ ಮನೆಯಲ್ಲಿ ಜಿಲೆಟಿನ್ ಕಡ್ಡಿಗಳು ಸ್ಫೋಟಗೊಂಡು ತಂದೆ-ಮಗಳು ಮೃತಪಟ್ಟಿದ್ದ ದುರಂತ ಘಟನೆಗೆ ಇದೀಗ ಮತ್ತೊಂದು ಸಾವು ಸೇರ್ಪಡೆಯಾಗಿದೆ.

ಸ್ಫೋಟದಲ್ಲಿ ಗಂಭೀರವಾಗಿ ಗಾಯಗೊಂಡು ಕಲಬುರಗಿಯ ಸರ್ಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದ ಶಿವಲಾಲ ಬಿಳಿರಾಮ ರಾಠೋಡ ಅವರ ಹಿರಿಯ ಪುತ್ರ ವಿತೇಶ ಶಿವಲಾಲ ರಾಠೋಡ (17) ಚಿಕಿತ್ಸೆ ಫಲಕಾರಿಯಾಗದೆ ಮಂಗಳವಾರ ಬೆಳಗಿನ ಜಾವ ಮೃತಪಟ್ಟಿದ್ದಾನೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಆ.11ರಂದು ನಡೆದ ಸ್ಫೋಟದಲ್ಲಿ ಮಾಡಿಯಾಳ ತಾಂಡಾದ ಶಿವಲಾಲ ಬಿಳಿರಾಮ ರಾಠೋಡ (49) ಹಾಗೂ ಅವರ ಪುತ್ರಿ ಮೀರಾಬಾಯಿ ಶಿವಲಾಲ ರಾಠೋಡ (15) ಸ್ಥಳದಲ್ಲೇ ಮೃತಪಟ್ಟಿದ್ದರು. ಘಟನೆಯಲ್ಲಿ ಶಿವಲಾಲ ಅವರ ಪತ್ನಿ ಸವಿತಾ ಶಿವಲಾಲ ರಾಠೋಡ, ಪುತ್ರರಾದ ವಿತೇಶ ಹಾಗೂ ಮತ್ತೊಬ್ಬ ಪುತ್ರ, ಅಲ್ಲದೆ, ಸವಿತಾ ಅವರ ಸಂಬಂಧಿಕರಾದ ಸೂರೆಖಾ ಕೃಷ್ಣಾ ಚವ್ಹಾಣ ಮತ್ತು ಅವರ ಪುತ್ರ ವಿವೇಕ ಚವ್ಹಾಣ ಗಂಭೀರವಾಗಿ ಗಾಯಗೊಂಡಿದ್ದರು.

ಗಂಭೀರ ಗಾಯಗೊಂಡಿದ್ದ ವಿತೇಶನನ್ನು ಕಲಬುರಗಿಯ ಸರ್ಕಾರಿ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿತ್ತು. ಆದರೆ ಒಂದು ವಾರದ ಚಿಕಿತ್ಸೆ ಬಳಿಕವೂ ಆರೋಗ್ಯದಲ್ಲಿ ಚೇತರಿಕೆ ಕಾಣದೆ ಮಂಗಳವಾರ ಮೃತಪಟ್ಟಿದ್ದಾನೆ. ಇದರಿಂದ ಒಂದೇ ಕುಟುಂಬದಲ್ಲಿ ಮೃತಪಟ್ಟವರ ಸಂಖ್ಯೆ ಮೂರಕ್ಕೆ ಏರಿಕೆಯಾಗಿದೆ.

## ಸಚಿವ ಸಂಪುಟ ಸಭೆ ನಡೆಸಲು ದಯಾನಂದ ಪಾಟೀಲ ಆಗ್ರಹ

ಕಲಬುರಗಿ:ಕಲ್ಯಾಣ ಕರ್ನಾಟಕ ಭಾಗದ ಬೀದರ್, ಕಲಬುರಗಿ, ಯಾದಗಿರಿ, ರಾಯಚೂರ, ಕೊಪ್ಪಳ, ಬಳ್ಳಾರಿ, ವಿಜಯನಗರ ಜಿಲ್ಲೆಗಳ ರೈತರು ಬರಗಾಲದಿಂದ ಸಂಕಷ್ಟದಲ್ಲಿದ್ದು, ಈ ಭಾಗದಲ್ಲಿ ಒಂದು ದಿನದ ಸಚಿವ ಸಂಪುಟ ಸಭೆ ನಡೆಸಿ ರೈತರ ಸಮಸ್ಯೆಗಳನ್ನು ಬಗೆ ಹ-ರಿಸಬೇಕು ಎಂದು ನವ ಕರ್ನಾಟಕ ರೈತ ಸಂಘದ ಅಧ್ಯಕ್ಷ ದಯಾನಂದ ಸಿ.ಪಾಟೀಲ ಒತ್ತಾಯಿಸಿದರು.

ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮೂರು ವರ್ಷಗಳ ಹಿಂದೆ ಈ ಭಾಗದಲ್ಲಿ ಅತಿವೃಷ್ಟಿಯಿಂದ ಆ ನಂತರ ಮಳೆ ಕೊರತೆಯಿಂದ ಬೆಳೆ ಹಾಳಾಗಿ ರೈತರು ಸಂಕಷ್ಟ ಎದು-ರಿಸುತ್ತಿದ್ದಾರೆ. ಈ ಬಾರಿ ಮಳೆಯಾಗದೆ ಬರಗಾಲ ಪರಿಸ್ಥಿತಿ ಎದುರಾಗಿದ್ದು, ಸಾಲಬಾಧೆ ತಾಳದೆ ರೈತರು ಆತ್ಮಹತ್ಯೆಗೆ ಶರಣಾಗುತ್ತಿದ್ದರೆ. ಈ ಹಿನ್ನೆಲೆಯಲ್ಲಿ ಈ ಭಾಗದಲ್ಲಿ ಒಂದು ದಿನದ ಸಚಿವ ಸಂಪುಟ ಸಭೆ ನಡೆಸಿ ಬರಗಾಲ ಘೋಷಣೆ, ರೈತರ ಸಾಲ ಮನ್ನಾ, ಉಳಿದ ಬೆಳೆ ವಿಮೆ ಹಣ ಬಿಡುಗಡೆ, ಬರ ಪರಿಹಾರ ಒದಗಿಸಲು ನಿರ್ಣಯ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಒಂದು ವೇಳೆ ಈ ಬಗ್ಗೆ ನಿರ್ಲಕ್ಷ್ಯ ವಹಿಸಿದರೆ ಕಲ್ಯಾಣ ಕರ್ನಾಟಕ ಭಾಗದ ರೈತರು, ಕೂಲಿಕಾರ್ಮಿಕರು ಮತ್ತು ಮಧ್ಯಮವರ್ಗದವರು ಸೇರಿ ಉಗ್ರ ಸ್ವರೂಪದ ಪ್ರತಿಭಟನೆ ಮಾಡಬೇಕಾಗುತ್ತದೆ ಎಂದು ಎಚ್ಚರಿಸಿದರು.

ಸಂಘದ ಜಿಲ್ಲಾ ಅಧ್ಯಕ್ಷ ಸುರೇಶ ಗುತ್ತೇದಾರ, ಯುವ ಅಧ್ಯಕ್ಷ ಶಿವರುದ್ರಯ್ಯ ಹಿರೇಮಠ, ಜಿಲ್ಲಾ ಯುವ ಮಹಿಳಾ ಘಟಕದ ಅಧ್ಯಕ್ಷೆ ನಿರ್ಮಲಾ ಚೌಧರಿ, ಶಿವಾನಂದ ಮಠಪತಿ, ಅಮರ್ ಝುಳಕಿ, ನಾಗೇಂದ್ರ ದಂಡೋತಿ ಸುದ್ದಿಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

# ದೇವರಾಜ ಅರಸು ಚಿಂತನೆಗಳು ಇಂದಿಗೂ ಪ್ರಸ್ತುತ

## ಮಹಿಳಾ ವಿವಿಯ ಕುಲಪತಿ ಪ್ರೊ.ವಿಜಯಾ ಕೋರಿಶೆಟ್ಟಿ ಅಭಿಮತ



■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ದೇವರಾಜ ಅರಸುರವರು ಜಾರಿಗೆ ತಂದ ಭೂ ಸುಧಾರಣೆ, ಜೀತ ಪದ್ಧತಿ ನಿರ್ಮೂಲನೆ ಸೇರಿದಂತೆ ಹಲವು ಕ್ರಾಂತಿಕಾರಿ ಕ್ರಮಗಳು ಇಂದಿಗೂ ಪ್ರಸ್ತುತವಾಗಿವೆ ಎಂದು ಮಹಿಳಾ ವಿವಿಯ ಕುಲಪತಿ ಪ್ರೊ. ವಿಜಯಾ ಬಿ. ಕೋರಿಶೆಟ್ಟಿ ಹೇಳಿದರು.

ನಗರದ ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯದ ಹಿಂದುಳಿದ ವರ್ಗಗಳ ಕೋಶದ ವತಿಯಿಂದ ಇತ್ತೀಚಿಗೆ ಹಮ್ಮಿಕೊಂಡಿದ್ದ ದಿವಂಗತ ಡಿ. ದೇವರಾಜ ಅರಸುರವರ 111ನೇ ಜನ್ಮದಿನಾಚರಣೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸಮಾಜದ ಒಳಿತಿನ ದೃಷ್ಟಿಯಿಂದ ದೇವರಾಜ ಅರಸುರವರು ತಮ್ಮ ಅಧಿಕಾರಾವಧಿಯಲ್ಲಿ ಹಲವು ಮಹತ್ವದ ಬದಲಾವಣೆಗಳನ್ನು ತಂದರು. ಭೂ ಸುಧಾರಣೆ, ಮಾನವ ಹಕ್ಕುಗಳ ರಕ್ಷಣೆ, ಮೈಸೂರು ರಾಜ್ಯಕ್ಕೆ ಕರ್ನಾಟಕ ಎಂದು ನಾಮಕರಣ ಹಾಗೂ ಜೀತ ಪದ್ಧತಿ ನಿರ್ಮೂಲನೆಯಂತಹ ಕ್ರಮಗಳು ಸಾಮಾಜಿಕ ಪರಿವರ್ತನೆಗೆ ಕಾರಣವಾದವು ಎಂದು ಹೇಳಿದರು.

ಕನ್ನಡ ವಿಭಾಗದ ಪ್ರಾಧ್ಯಾಪಕ ಪ್ರೊ. ನಾಗರಾಜ ಮಾತನಾಡಿ, 1970ರ ದಶಕದಲ್ಲಿ ಕರ್ನಾಟಕದಲ್ಲಿ ಕ್ರಾಂತಿಕಾರಿ ಬದಲಾವಣೆ ತಂದ ರಾಜಕೀಯ ಮುತ್ಸದ್ದಿ ದೇವರಾಜ ಅರಸು ಅವರ ಕೊಡುಗೆಗಳು ಅಮರವಾಗಿವೆ ಎಂದರು.

ವಿಜಯಪುರದ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಮಹೇಶ ಪೋತದಾರ್ ಮಾತನಾಡಿ, ದೇವರಾಜ ಅರಸುರವರ ಅಭಿವೃದ್ಧಿ ಚಿಂತನೆಗಳನ್ನು ಆಧಾರವಾಗಿಟ್ಟುಕೊಂಡು ರಾಜ್ಯದ ಬೆಳವಣಿಗೆಗೆ ಹೊಸ ದಿಕ್ಕು ದೊರೆಯಿತು. 'ಉಳುವವನೇ ಭೂಮಿಯ ಒಡೆಯ' ಎಂಬ ಕಾನೂನಿನ ಮೂಲಕ ಸರ್ವರಿಗೂ ಸಮಬಾಳು, ಸರ್ವರಿಗೂ ಸಮಪಾಲು ಎಂಬ ತತ್ವವನ್ನು ಅನುಷ್ಠಾನಕ್ಕೆ ತರಲಾಯಿತು ಎಂದು ಹೇಳಿದರು.

ಶಿಕ್ಷಣ ವಿಭಾಗದ ವಿದ್ಯಾರ್ಥಿನಿ ಮಮತಾಜ್ ಸ್ವಾಗತಿಸಿದರು. ಸವಿತಾ ಪವಾರ ಪರಿಚಯಿಸಿದರು.

ಸೌಂದರ್ಯ ಲೋಣಿ ವಂದಿಸಿದರು. ಸಂಗೀತ ವಿಭಾಗದ ವೀಣಾ ಪೊತದಾರ್ ಪ್ರಾರ್ಥಿಸಿದರು. ರೇಣುಕಾ ಬಿಸಲಾನಾಯಕ ನಿರೂಪಿಸಿದರು.

ಕಾರ್ಯಕ್ರಮದಲ್ಲಿ ವಿಶ್ವವಿದ್ಯಾಲಯದ ಡೀನರು, ವಿವಿಧ ವಿಭಾಗಗಳ ಮುಖ್ಯಸ್ಥರು, ಸಂಯೋಜಕರು, ವಿದ್ಯಾರ್ಥಿಗಳು ಹಾಗೂ ಬೋಧಕೇತರ ಸಿಬ್ಬಂದಿ ಉಪಸ್ಥಿತರಿದ್ದರು.

# 'ಶಿಕ್ಷಕ ಸೇವಾ ರತ್ನ' ಪ್ರಶಸ್ತಿ ಪುರಸ್ಕೃತ ಮಠೋಳಿ ಗೆ ಸನ್ಮಾನ




■ ಉದಯರಶ್ಮಿ ದಿನಪತ್ರಿಕೆ

ಬಾಗಲಕೋಟೆ (ಜಮಖಂಡಿ): ತಾಲೂಕಿನ ಜಂಬಗಿ ಗ್ರಾಮದ ಸರ್ಕಾರಿ ಪ್ರೌಢಶಾಲೆಯ ಸಹ ಶಿಕ್ಷಕ ಬಾಳಪ್ಪ ಮ. ಮಠೋಳಿ (ಬಿ.ಎಂ. ಮಠೋಳಿ) ಅವ–ರಿಗೆ ರಾಜ್ಯಮಟ್ಟದ ಪ್ರತಿಷ್ಠಿತ 'ಶಿಕ್ಷಕ ಸೇವಾ ರತ್ನ' ಪ್ರಶಸ್ತಿ ಲಭಿಸಿದ್ದು, ಈ ಹಿನ್ನೆಲೆಯಲ್ಲಿ ಚಿಕ್ಕಪಡಸಲಗಿ ಗ್ರಾಮದ ಶ್ರೀ ಗುರು ರಾಮಾಅವಧೂತ ವಿದ್ಯಾ ಸಂಸ್ಥೆ ವತಿಯಿಂದ ಅಭಿನಂದನಾ ಹಾಗೂ ಸನ್ಮಾನ ಕಾರ್ಯಕ್ರಮ ನಡೆಯಿತು.

ಕರ್ನಾಟಕ ರಾಜ್ಯ ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾ ಘಟಕ ಹಾಗೂ ಜಮಖಂಡಿ ತಾಲೂಕು ಘಟಕ ಮತ್ತು ವೀರೇಶ್ವರ ಪ್ರಕಾಶನ, ಜಮಖಂಡಿ ಇವರ ಸಹಯೋಗದಲ್ಲಿ ಶಿಕ್ಷಕರ ಶೈಕ್ಷಣಿಕ ಸೇವೆ, ಸಾಧನೆ ಹಾಗೂ ಶಿಕ್ಷಣ ಕ್ಷೇತ್ರಕ್ಕೆ ನೀಡಿದ ಕೊಡುಗೆಯನ್ನು ಗುರುತಿಸಿ ಮಠೋಳಿ ಅವರಿಗೆ ಪ್ರಶಸ್ತಿ ಪ್ರದಾನ ಮಾಡಲಾಗಿದೆ.

ಪ್ರಶಸ್ತಿ ಪಡೆದ ಮಠೋಳಿ ಅವರನ್ನು ಶ್ರೀ ಗುರು ರಾಮಾಅವಧೂತ ವಿದ್ಯಾ ಸಂಸ್ಥೆಯ ವತಿಯಿಂದ ಗೌರವಿಸಲಾಯಿತು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಬಿ.ಎಂ. ಮಠೋಳಿ, "ಶಿಕ್ಷಕ ವೃತ್ತಿ ವಿದ್ಯಾರ್ಥಿಗಳ ಭವಿಷ್ಯ ರೂಪಿಸುವ ಮಹತ್ವದ ಜವಾಬ್ದಾರಿಯಾಗಿದೆ. ನನಗೆ ದೊರೆತಿರುವ ಈ ಗೌರವವನ್ನು ಇನ್ನಷ್ಟು ನಿಷ್ಠೆಯಿಂದ ಶೈಕ್ಷಣಿಕ ಸೇವೆ ಸಲ್ಲಿಸಲು ಪ್ರೇರಣೆಯಾಗಿದೆ ಎಂದರು.

ಸಂಸ್ಥೆಯ ಆಡಳಿತ ಮಂಡಳಿ ಸದಸ್ಯರು, ಮುಖ್ಯಗುರು ರಾಜು ಮಿರ್ಜಿ, ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಇದ್ದರು.

# ಎ.ವಿ.ಎಸ್. ಆಯುರ್ವೇದ ಕಾಲೇಜ್: ಆ.24 ರಿಂದ ಆರೋಗ್ಯ ಶಿಬಿರ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ನಗರದ ಬಿ.ಎಲ್.ಡಿ.ಇ ಸಂಸ್ಥೆಯ ಎ.ವಿ.ಎಸ್. ಆಯುರ್ವೇದ ಮಹಾವಿದ್ಯಾಲಯದ ಶಲ್ಯ ತಂತ್ರ ವಿಭಾಗದ ವತಿಯಿಂದ ಅಗ್ನಿಕರ್ಮಚಿಕಿತ್ಸೆ ಕುರಿತು ಆರು ದಿನಗಳ ಉಚಿತ ಶಿಬಿರ ಆಗಷ್ಟ 24 ರಿಂದ ಆಗಷ್ಟ 29ರ ವರೆಗೆ ನಡೆಯಲಿದೆ.

ಬಿ.ಎಲ್.ಡಿ.ಇ ಆಯುರ್ವೇದ ಹೈಟೆಕ್ ಆಸ್ಪತ್ರೆಯ ನಡೆಯಲಿರುವ ಈ ಶಿಬಿರದಲ್ಲಿ ಬೆನ್ನು ನೋವು, ಭುಜ ನೋವು, ಕತ್ತು ನೋವು , ಹಿಮ್ಮಡಿ ನೋವು, ಸಂಧಿ ನೋವು ಮುಂತಾದವುಗಳಿಗೆ ಉಚಿತ ತಪಾಸಣೆ ಹಾಗೂ ಉಚಿತ ಚಿಕಿತ್ಸೆ ನೀಡಲಾಗುವುದು.

ಇಂಥ ಸಮಸ್ಯೆಗಳನ್ನು ಎದುರಿಸುತ್ತಿರುವ ಸಾರ್ವಜನಿಕರು ಈ ಶಿಬಿರದ ಸದುಪಯೋಗವನ್ನು ಪಡೆದುಕೊಳ್ಳಬೇಕು ಎಂದು ಬಿ.ಎಲ್.ಡಿ.ಇ ಹೈಟೆಕ್ ಆಯುರ್ವೇದ ಆಸ್ಪತ್ರೆಯ ಆಡಳಿತಾಧಿಕಾರಿ ಡಾ. ಸಂಜಯ ಕಡ್ಲಿಮಟ್ಟಿ ಮಾಧ್ಯಮ ಪ್ರಕಟಣೆಯಲ್ಲಿ ಮಾಹಿತಿ ನೀಡಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ ಆಸ್ಪತ್ರೆಯ ಮೊ. ನಂ. 9513397413 ಸಂಪರ್ಕಿಸಬಹುದಾಗಿದೆ.


## ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ, ಆಲಮೇಲ

**ಪ್ರಕಟಣೆ**

ನಂ/ಕೃಉಮಾಸ/ಆಲ/ನಿವೇಶನ/178 /2026-27 ದಿನಾಂಕ: 20-08-2026

ಆಲಮೇಲ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ಕಾರ್ಯ ಕ್ಷೇತ್ರದಲ್ಲಿ ಮುಖ್ಯ ಮಾರುಕಟ್ಟೆ ಪ್ರಾಂಗಣ ಹಾಗೂ ಉಪ–ಮಾರುಕಟ್ಟೆ ಪ್ರಾಂಗಣಗಳಲ್ಲಿ ವ್ಯವಹರಿಸುತ್ತಿರುವ ಯಾವಾತ್ತೂ ವರ್ತಕರು/ ಪೇಟೆ ಕಾರ್ಯಕರ್ತರಿಗೆ ಹಾಗೂ ರೈತ ಬಾಂದವರಿಗೆ ತಿಳಿಸುವದೇನೆಂದರೆ, ಆಲಮೇಲ ಮುಖ್ಯ ಮಾರುಕಟ್ಟೆ ಪ್ರಾಂಗಣದಲ್ಲಿರುವ ನಿವೇಶನ ಸಂ.12 ನ್ನು ಹಂಚಿಕೆ ಪಡೆದಿರುವ ಶ್ರೀ ಶ್ರೀಮಂತ ರಾಮಚಂದ್ರ ದುದ್ದಗಿ, ವರ್ತಕರು ಸಾ॥ಆಲಮೇಲ ಇವರು ಶ್ರೀ ನಾಗಪ್ಪ ಶಿವಾನಂದ ಅಮರಗೊಂಡ, ವರ್ತಕರು ಸಾ॥ ಆಲಮೇಲ ಇವರಿಗೆ ನಿವೇಶನ ಸಂ.12 ನ್ನು ವರ್ಗಾವಣೆ ಮಾಡಲು ವಿನಂತಿಸಿರುತ್ತಾರೆ. ಆದ್ದರಿಂದ ಯಾವತ್ತೂ ವರ್ತಕರು /ಪೇಟೆ ಕಾರ್ಯಕರ್ತರು ಹಾಗೂ ರೈತ ಬಾಂಧವರು ತಮಗೆ ಶ್ರೀ ಶ್ರೀಮಂತ ರಾಮಚಂದ್ರ ದುದ್ದಗಿ ಇವರಿಂದ ಬರಬೇಕಾದ ಯಾವುದಾದರೂ ಬಾಕಿ ಇದ್ದಲ್ಲಿ ಈ ಸಮಿತಿಗೆ 07ದಿನಗ ಳೊಳಗಾಗಿ ತಿಳಿಸಬೇಕೆಂದು ಕೋರಲಾಗಿದೆ.

ಸಹಿ/–
ಕಾರ್ಯದರ್ಶಿ(ಪ್ರ)
ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಆಲಮೇಲ

ಸಹಿ/–
ಅಧ್ಯಕ್ಷರು
ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಆಲಮೇಲ


ಉದಯರಶ್ಮಿ ದಿನಪತ್ರಿಕೆ ಓದಿರಿ

# ಕೇವಲ 5 ಗಂಟೆಯಲ್ಲೇ 11ಎಕರೆ ಜಮೀನು ಹರಗಿದ ರೈತ ಗುರುಪಾದ

## ಬೂದಿಹಾಳ ಪಿಎಚ್ ಗ್ರಾಮದ ರೈತನ ಜೋಡೆತ್ತುಗಳ ಅಪ್ರತಿಮ ಸಾಧನೆಗೆ ಜನರ ಮೆಚ್ಚುಗೆ

■ ಉದಯರಶ್ಮಿ ದಿನಪತ್ರಿಕೆ



ಸಿಂದಗಿ: ಶೈಕ್ಷಣಿಕ ಕಾಶಿಯ ಸಿಂದಗಿ ತಾಲೂಕಿನ ರೈತರು ಮುಂಗಾರು ಆರಂಭವಾಗುತ್ತಿದ್ದಂತೆ ಕೈಗೊಳ್ಳುವ ಕೃಷಿ ಚಟುವಟಿಗಳು ನಾನಾ ಸಾಧನೆಗಳಿಗೆ ಪ್ರೇರೆಪಿಸುತ್ತಿವೆ. ಇಂತಹದ್ದೆ ಸಾಧನೆಯೊಂದನ್ನು ಸಿಂದಗಿ ತಾಲೂಕಿನ ಬೂದಿಹಾಳ ಪಿಹೆಚ್ ಗ್ರಾಮದ ರೈತ ಮತ್ತು ಆತನ ಎತ್ತುಗಳು ಮಾಡುವ ಮೂಲಕ ಗಮನ ಸೆಳೆದಿದ್ದಾರೆ.

ನಾಗರ ಪಂಚಮಿ ಮತ್ತು ಸ್ವಾತಂತ್ರ್ಯ ದಿನಾಚರಣೆ ಅಂಗವಾಗಿ ರೈತ ಗುರುಪಾದ ಚೌಧರಿ ತನ್ನ ಜೋಡೆತ್ತುಗಳಿಗೆ ನೊಗಕಟ್ಟಿ ತಮ್ಮ ಜೋಡಿ ಎತ್ತುಗಳೊಂದಿಗೆ ಕೇವಲ 5ಗಂಟೆಯಲ್ಲಿಯೇ ಒಂಟಿ ದಿಂಡಿನ ಸಹಾಯದಿಂದ 11 ಎಕರೆ ಜಮೀನು ಹರಗಿ ಗಮನ ಸೆಳೆದಿದ್ದಾರೆ.

ಪಂಚಮಿ ಬಂತೆಂದರೆ ಸಾಕು ವಿಜಯಪುರ ಜಿಲ್ಲೆಯ ಸಿಂದಗಿ ತಾಲೂಕಿನ ರೈತರು ತಮ್ಮ ಜಾನುವಾರುಗಳ ಮೂಲಕ ವಿವಿಧ ಸಾಧನೆ ಮಾಡುತ್ತಾರೆ. ಅಂತೆಯೇ ಈ ರೈತ ತನ್ನ ಊರಾದ ಬೂದಿಹಾಳ ಗ್ರಾಮದಲ್ಲಿ 5ಗಂಟೆಯಲ್ಲಿ 11ಎಕರೆ ಜಮೀನು ಹರಗುವ ಮೂಲಕ ರೈತರು ಮೆಚ್ಚುವ ಸಾಧನೆ ಮಾಡಿದ್ದಾರೆ.

ಕೃಷಿಕ ಈ ಸಾಧನೆ ಮಾಡುತ್ತಿದ್ದಾನೆ ಎಂಬುದನ್ನು ಅರಿತ ಬೂದಿಹಾಳ ಗ್ರಾಮದ ರೈತರು ಆಗಮಿಸಿದ್ದಾರೆ. ಅಲ್ಲದೇ, ರೈತ ಮತ್ತು ಆತನ ಜೋಡೆತ್ತುಗಳ ಸಾಧನೆಗಳನ್ನು ಕಣ್ತುಂಬಿಕೊಂಡು ಅಭಿನಂದನೆ ಸಲ್ಲಿಸಿದ್ದಾರೆ. ಅಷ್ಟೇ ಅಲ್ಲ, ಗ್ರಾಮದ ಜನರೂ ಕೂಡ ತಮ್ಮೂರಿನ ಹೆಮ್ಮೆಯ ರೈತ ಹಾಗೂ ಆತನ ಎತ್ತುಗಳಿಗೆ ಗುಲಾಲು (ಬಣ್ಣ) ಹಚ್ಚಿ ಸಂಭ್ರಮಾಚರಣೆ ಮಾಡಿದ್ದಾರೆ.

ಈ ಕುರಿತು ಪ್ರತಿಕ್ರಿಯೆ ನೀಡಿರುವ ರೈತ ಗುರುಪಾದ ಚೌಧರಿ, ಕಳೆದ ಹಲವು ವರ್ಷಗಳಿಂದ ಭೂಮಿಯನ್ನು ಹರಗುತ್ತಲೇ ಬಂದಿದ್ದೆ, ಆದರೆ ಸಂಭ್ರಮಾಚರಣೆ ಮಾಡಿರಲಿಲ್ಲ. ಮನೆಯಲ್ಲಿ ದನಕರುಗಳು ಇರಬೇಕು. ಹಂಬಲದಿಂದ ಎತ್ತುಗಳನ್ನು ಕಟ್ಟಬೇಕು. ಸಾಂಪ್ರದಾಯಿಕ ಕೃಷಿ ಪದ್ಧತಿ ಉಳಿಯಬೇಕು ಎಂಬ ಸದುದ್ದೇಶದಿಂದ ಪ್ರಯತ್ನ ಮಾಡಿದ್ದೇನೆ. ಆಧುನಿಕ ಯಂತ್ರೋಪಕರಣಗಳಿಗೆ ಹೆಚ್ಚು ಮಾರು ಹೋಗದೇ ಸಾಂಪ್ರದಾಯಿಕ ಕೃಷಿ ಪದ್ಧತಿಯನ್ನು ರೈತರು ಉಪಯೋಗಿಸಬೇಕು. ಎರಡೆತ್ತುಗಳು ಮನೆಯಲ್ಲಿದ್ದರೆ ಅದಕ್ಕೊಂದು ಸಿರಿಯೇ ಬೇರೆ ಎಂದರು.

ಈ ರೈತ ಸಾಧನೆಯ ಬಗ್ಗೆ ಗ್ರಾಮದ ರೈತರಾದ ಶರಣಗೌಡ ಬಿರಾದಾರ ಮತ್ತು ಶಿವನಗೌಡ ಬಿರಾದಾರ ಸಂತಸ ವ್ಯಕ್ತಪಡಿಸಿದ್ದು, ಈ ರೈತ ತಮ್ಮೂರಿಗೆ ಕೀರ್ತಿ ತಂದಿದ್ದಾನೆ ಎಂದು ಹರ್ಷ ವ್ಯಕ್ತಪಡಿಸಿದ್ದಾರೆ.

# ಸರಕಾರಿ ಸೌಲಭ್ಯ ಸದ್ಬಳಕೆಯಿಂದ ಗುರಿ ತಲುಪಿ : ಬಿರಾದಾರ

■ ಉದಯರಶ್ಮಿ ದಿನಪತ್ರಿಕೆ




ವಿಜಯಪುರ: ಸರಕಾರ ಅತ್ಯಧುನಿಕ ಸೌಲಭ್ಯಗಳನ್ನು ಗ್ರಾಮೀಣ ವಿದ್ಯಾರ್ಥಿಗಳಿಗೂ ಕಲ್ಪಿಸಿದ್ದು, ಹಾಗಾಗಿ ಕಾಲೇಜ್‌ನಲ್ಲಿ ಸಿಗುವ ಸೌಲಭ್ಯಗಳ ಸದುಪಯೋಗ ಪಡೆದುಕೊಂಡು, ಕನಸು ನನಸು ಮಾಡಿಕೊಳ್ಳುವ ಮೂಲಕ ಹೆತ್ತವರಿಗೆ, ಹುಟ್ಟಿದೂರಿಗೆ ಹಾಗೂ ಶಿಕ್ಷಕರ ಕೀರ್ತಿ ಹೆಚ್ಚಿಸಬೇಕು ಎಂದು ಗ್ರಾಮ ಪಂಚಾಯಿತಿ ಮಾಜಿ ಉಪಾಧ್ಯಕ್ಷ ಗುರನಗೌಡ ಬಿರಾದಾರ ಹೇಳಿದರು.

ಕೊಲ್ಹಾರ ತಾಲೂಕಿನ ಕುಪಕಡ್ಡಿಯಲ್ಲಿ ಹೊಸದಾಗಿ ಪ್ರಾರಂಭವಾದ ಸರಕಾರಿ ಪದವಿ ಪೂರ್ವ ಕಾಲೇಜಿನ 2026–27 ನೇ ಸಾಲಿನ ಪ್ರಥಮ ಪಿಯುಸಿ ವಿದ್ಯಾರ್ಥಿಗಳ ಸ್ವಾಗತ ಹಾಗು ಸಾಂಸ್ಕೃತಿಕ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಕಾಲೇಜಿನ ಪ್ರಾಚಾರ್ಯ ಎಚ್. ಎಲ್. ದೊಡಮನಿ ಮಾತನಾಡಿ, ಊರಿನ ಶಿಕ್ಷಣ ಪ್ರೇಮಿಗಳ ಪರಿಶ್ರಮದಿಂದ ನಮ್ಮ ಗ್ರಾಮಕ್ಕೆ ಸರಕಾರಿ ಪದವಿ ಪೂರ್ವ ಕಾಲೇಜು ಮಂಜೂರಾಗಿದ್ದು ಇದು ಗ್ರಾಮೀಣ ಹೆಣ್ಣು ಮಕ್ಕಳ ಶಿಕ್ಷಣಕ್ಕೆ ತುಂಬಾ ಸಹಕಾರಿಯಾಗಿದೆ. ಕಾಲೇಜು ಮಂಜೂರಿಗೆ ಶ್ರಮಿಸಿದ ಗ್ರಾಮದ ಎಲ್ಲ ಧುರೀಣರಿಗೆ ಕೃತಜ್ಞತೆಗಳನ್ನು ಸಲ್ಲಿಸಿ ಸಮುದಾಯದ ಸಹಭಾಗಿತ್ವದಿಂದ ಮಾತ್ರ ಶಿಕ್ಷಣ ಸಂಸ್ಥೆಗಳು ಉನ್ನತ ಮಟ್ಟಕ್ಕೆ ಬೆಳೆಯಲು ಸಾಧ್ಯ. ಎಂದ ಅವರು, ಕುಪಕಡ್ಡಿ ಗ್ರಾಮಸ್ಥರು ಕಾಲೇಜು ಅಭಿವೃದ್ಧಿಗೆ ಸಕಲ ಸಹಕಾರ ನೀಡುತ್ತಿರುವದು ಮಾದರಿ ಕಾರ್ಯ ಎಂದು ಶ್ಲಾಘಿಸಿದರು.

ಕಾಲೇಜಿಗೆ 25000 ರೂ. ಮೌಲ್ಯದ ಪೀಠೋಪಕರಣಗಳನ್ನು ದೇಣಿಗೆ ನೀಡಿದ ಉದ್ಯಮಿ ಹಾಗೂ ಪಿಕೆಪಿಎಸ್ ನಿರ್ದೇಶಕ ಉಮೇಶ ಇಂಡಿ ಅವರು ಸನ್ಮಾನ ಸ್ವೀಕರಿಸಿ ಮಾತನಾಡಿದರು.

ಪ್ರೌಢಶಾಲೆ ಮುಖ್ಯ ಶಿಕ್ಷಕಿ ರೇಖಾ ಟಿ. ಮಾತನಾಡಿ, ಇಂದಿನ ವಿದ್ಯಾರ್ಥಿಗಳು ಮಾನವೀಯ ಮೌಲ್ಯಗಳನ್ನು ಬೆಳೆಸಿಕೊಳ್ಳುವದು ಮುಖ್ಯವಾಗಿದ್ದು ಸಂಸ್ಕಾರವಿಲ್ಲದ ಶಿಕ್ಷಣ ನಮಗೆ ಬೇಕಾಗಿಲ್ಲ ಎಂದರು. ಕಾಲೇಜಿನ ನಾಮಫಲಕ ದೇಣಿಗೆ ನೀಡಿದ ನರಸು ಪತ್ತಾರ ಹಾಗೂ ನಗದು ಕಾಣಿಕೆ ನೀಡಿದ ಹಿರಿಯ ಶಿಕ್ಷಕ ಅಪ್ಪಾಸಾಹೇಬ ಕುಲಕರ್ಣಿ ಅವರನ್ನು ಇದೇ ವೇಳೆ ಸನ್ಮಾನಿಸಲಾಯಿತು.

ಗ್ರಾಮದ ಹಿರಿಯರು, ಪಿಕೆಪಿಎಸ್ ಸದಸ್ಯರು ಹಾಗೂ ಮಾಜಿ ಅಧ್ಯಕ್ಷರಾದ ಸಂಗನಗೌಡ ಬಿರಾದಾರ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು.

ಪಿಕೆಪಿಎಸ್ ಅಧ್ಯಕ್ಷರಾದ ದೊಡ್ಡನಗೌಡ ಬಿರಾದಾರ, ಎಸ್ ಡಿಎಮ್ ಸಿ ಮಾಜಿ ಅಧ್ಯಕ್ಷರಾದ ಉದಯಕುಮಾರ ಹಳ್ಳಿ, ಎಸ್ ಡಿ ಎಮ್ ಸಿ ಅಧ್ಯಕ್ಷ ಸಂಗು ಉಗ್ರಾಣ, ಗ್ರಾ ಪಂ ಮಾಜಿ ಸದಸ್ಯರಾದ ಮಹಾದೇವ ಚಲವಾದಿ, ಈಶ್ವರ ಕೋಲ್ಹಾರ, ಅಮೀನಸಾಬ ಪೆಂಡಾರಿ, ಪಿಕೆಪಿಎಸ್ ಸದಸ್ಯ ಪ್ರಕಾಶ ಬಿರಾದಾರ, ಶಾಂತು ಹಲಗಲಿ, ಸತ್ಯಪ್ಪ ಮದಗುಣಕಿ, ಪ್ರೌಢಶಾಲಾ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

ಕಾರ್ಯಕ್ರಮಕ್ಕೆ ಸಂಗನಗೌಡ ಬಿರಾದಾರ, ದೊಡ್ಡನಗೌಡ ಬಿರಾದಾರ, ಉದಯಕುಮಾರ ಹಳ್ಳಿ, ಯುವ ಧುರೀಣ ಚಂದ್ರು ಅಂಬಿಗೇರ, ಮಹಾದೇವ ಚಲವಾದಿ ಸಹಕಾರ ನೀಡಿದರು.

ಕುಮಾರಿ ಭಾಗ್ಯಶ್ರೀ ಮ್ಯಾಗಾಡಿ ಹಾಗೂ ಸಂಗಡಿಗರು ಪ್ರಾರ್ಥಿಸಿದರು. ಪ್ರಿಯಂಕಾ ಇಂಡಿ ಹಾಗೂ ಸಂಗಡಿಗರು ಸ್ವಾಗತ ಗೀತೆಯೊಂದಿಗೆ ಕಾರ್ಯಕ್ರಮ ಪ್ರಾರಂಭವಾಯಿತು. ಅತಿಥಿ ಉಪನ್ಯಾಸಕ ಯಲ್ಲಪ್ಪ ಹಳಬರ ಸ್ವಾಗತಿಸಿದರು. ಡಾ:ಲಕ್ಷ್ಮೀ ಅಂಗಡಿ ನಿರೂಪಿಸಿದರು. ಶ್ರೀಕಾಂತ ಪೂಜಾರಿ ವಂದಿಸಿದರು.

# ಕೂಡಗಿ ಎನ್‌ಟಿಪಿಸಿಯಿಂದ ವಿಶೇಷಚೇತನರಿಗೆ ಸಾಧನಗಳ ವಿತರಣೆ

■ ಉದಯರಶ್ಮಿ ದಿನಪತ್ರಿಕೆ



ಕೊಲ್ಹಾರ: ಸಣ್ಣದೊಂದು ನೆರವು ವ್ಯಕ್ತಿಯ ಸ್ವಾವಲಂಬನೆಯ ಪಯಣದಲ್ಲಿ ದೊಡ್ಡ ಬದಲಾವಣೆಗೆ ಕಾರಣವಾಗಬಹುದು ಎಂಬ ಆಶಯದೊಂದಿಗೆ ತಾಲೂಕಿನ ಕೂಡಗಿ ಎನ್‌ಟಿಪಿಸಿ ತನ್ನ ಕಾರ್ಪೊರೇಟ್ ಸಾಮಾಜಿಕ ಹೊಣೆಗಾರಿಕೆ (ಅಖಖ) ಯೋಜನೆಯಡಿ ವಿಶೇಷಚೇತನರಿಗೆ ಸಹಾಯಕ ಸಾಧನಗಳನ್ನು ವಿತರಿಸಿತು.

ಎನ್‌ಟಿಪಿಸಿ ಕೂಡಗಿ ಹಾಗೂ ಬೆಂಗಳೂರಿನ ಭಾರತೀಯ ಕೃತಕ ಅಂಗ ತಯಾರಿಕಾ ನಿಗಮ (ಂಐಖಒ–ಅಔ) ಸಹಯೋಗದಲ್ಲಿ ಸಹಾಯಕ ಸಾಧನಗಳ ವಿತರಣಾ ಕಾರ್ಯಕ್ರಮ ಆಯೋಜಿಸಲಾಗಿತ್ತು.

ಕೂಡಗಿ, ಮುತ್ತಗಿ, ಮಸೂತಿ, ತೆಲಗಿ ಹಾಗೂ ಗೋಳಸಂಗಿ ಸುತ್ತಮುತ್ತಲಿನ ಗ್ರಾಮಗಳ 109 ವಿಶೇಷಚೇತನ ಫಲಾನುಭವಿಗಳಿಗೆ ಒಟ್ಟು 191 ಸಹಾಯಕ ಸಾಧನಗಳನ್ನು, ಸುಮಾರು 30 ಲಕ್ಷ ಮೌಲ್ಯದಲ್ಲಿ ವಿತರಿಸಲಾಯಿತು.

ವಿತರಿಸಲಾದ ಸಾಧನಗಳಲ್ಲಿ ಮೋಟಾರ್ ಚಾಲಿತ ತ್ರಿಚಕ್ರ ವಾಹನಗಳು, ಗಾಲಿಕುರ್ಚಿಗಳು, ಶ್ರವಣ ಸಾಧನಗಳು, ಊರುಗೋಲುಗಳು, ವಿವಿಧ ವಾಕಿಂಗ್ ಏಡ್ಸ್, ಶೈಕ್ಷಣಿಕ ಕಿಟ್‌ಗಳು, ಸ್ಮಾರ್ಟ್‌ಫೋನ್‌ಗಳು, ಕೃತಕ ಅಂಗಗಳು ಹಾಗೂ ಕ್ಯಾಲಿಪರ್‌ಗಳು ಸೇರಿದಂತೆ ವಿವಿಧ ಸಹಾಯಕ ಸಾಧನಗಳು ಒಳಗೊಂಡಿದ್ದವು.

ಈ ಸಾಧನಗಳು ವಿಶೇಷಚೇತನರ ಚಲನವಲನ, ಸಂವಹನ, ಶಿಕ್ಷಣ ಹಾಗೂ ದೈನಂದಿನ ಚಟುವಟಿಕೆಗಳಿಗೆ ನೆರವಾಗುವುದರೊಂದಿಗೆ ಸ್ವಾವಲಂಬನೆ, ಆತ್ಮವಿಶ್ವಾಸ ಮತ್ತು ಗೌರವಯುತ ಜೀವನಕ್ಕೆ ಉತ್ತೇಜನ ನೀಡುವ ಉದ್ದೇಶ ಹೊಂದಿವೆ.

ಕಾರ್ಯಕ್ರಮದಲ್ಲಿ ಕೂಡಗಿ ಎನ್‌ಟಿಪಿಸಿ ಯೋಜನಾ ಮುಖ್ಯಸ್ಥ ಸಂತೋಷ್ ತಿವಾರಿ, ಎಸ್.ಯು. ಹ–ರಿದಾಸ್, ಸಂಜಿತ್ ದತ್ತಾ, ಎಸ್.ವಿ.ಡಿ. ರವಿಕುಮಾರ್, ಮುಖ್ಯ ವೈದ್ಯಾಧಿಕಾರಿ ಡಾ. ರಾಜ್ ಬೋರಾವಂಕರ್, ಕಾರ್ಮಿಕ ಸಂಘಟನೆಗಳ ಹಾಗೂ ಅಸೋಸಿಯೇಷನ್‌ಗಳ ಪ್ರತಿನಿಧಿಗಳು ಮತ್ತು ಕೂಡಗಿ ಎನ್‌ಟಿಪಿಸಿ ಅಧಿಕಾರಿಗಳು ಉಪಸ್ಥಿತರಿದ್ದರು.

# ದುಶ್ಚಟಗಳ ಭಿಕ್ಷೆ, ಸದ್ಗುಣಗಳ ದೀಕ್ಷೆ: ಜನಜಾಗೃತಿ ಪಾದಯಾತ್ರೆ

■ ಉದಯರಶ್ಮಿ ದಿನಪತ್ರಿಕೆ

ಬಾಗಲಕೋಟೆ (ಜಮಖಂಡಿ): "ಸರಿಯಾದ ಮಾರ್ಗವನ್ನು ತೋರಿಸುವವರೇ ನಮ್ಮ ನಿಜವಾದ ಸ್ನೇಹಿತರು. ನಮ್ಮನ್ನು ದುಶ್ಚಟಗಳ ದಾ–ರಿಗೆ ಕೊಂಡೊಯ್ಯುವವರೇ ನಿಜವಾದ ಶತ್ರುಗಳು. ಯುವಕರು ದುಶ್ಚಟಗಳಿಂದ ದೂರ ಉಳಿದು ಸದ್ಗುಣಗಳನ್ನು ಮೈಗೂಡಿಸಿಕೊಂಡಾಗ ಮಾತ್ರ ಆರೋಗ್ಯವಂತ ಸಮಾಜ ನಿರ್ಮಾಣ ಸಾಧ್ಯ" ಎಂದು ಓಲೆಮಠದ ಆನಂದ ಶ್ರೀಗಳು ಹೇಳಿದರು.

ತಾಲೂಕಿನ ಕಡಪಟ್ಟಿಟಿ ಹಂಚಿನಾಳ ಗ್ರಾಮದಲ್ಲಿ ಓಲೆಮಠದ ಆಶ್ರಯದಲ್ಲಿ ವ್ಯಸನ ಮುಕ್ತ ಗ್ರಾಮಗಳ ನಿರ್ಮಾಣದ ಸಂಕಲ್ಪದೊಂದಿಗೆ ಹಮ್ಮಿಕೊಂಡಿರುವ ಒಂಬತ್ತು ದಿನಗಳ 'ದುಶ್ಚಟಗಳ ಭಿಕ್ಷೆ, ಸದ್ಗುಣಗಳ ದೀಕ್ಷೆ' ಜನಜಾಗೃತಿ ಯಾತ್ರೆಯ ಅಂಗವಾಗಿ ಗ್ರಾಮದಲ್ಲಿ ರುದ್ರಾಕ್ಷಿ ಧಾರಣ ಹಾಗೂ ಸದ್ಭಾವನ ಪಾದಯಾತ್ರೆ ಸಂದರ್ಭದಲ್ಲಿ ಅವರು ಮಾತನಾಡಿದರು.

ಗ್ರಾಮದ ಮನೆ ಮನೆಗೆ ತೆರಳಿ ಜನರಲ್ಲಿ ದುಶ್ಚಟಗಳ ವಿರುದ್ಧ ಜಾಗೃತಿ ಮೂಡಿಸಿದ ಶ್ರೀಗಳು, ಮದ್ಯಪಾನ, ಧೂಮಪಾನ ಹಾಗೂ ತಂಬಾಕು ಸೇವನೆಯಿಂದ ಆರೋಗ್ಯ ಹದಗೆಡುವುದರ ಜೊತೆಗೆ ಕುಟುಂಬದ ನೆಮ್ಮದಿಯೂ ಹಾಳಾಗುತ್ತದೆ ಎಂದು ಎಚ್ಚ–ರಿಸಿದರು.

ದುಶ್ಚಟ ಹೊಂದಿರುವವರು ಅವುಗಳನ್ನು ತ್ಯಜಿಸುವ ಸಂಕಲ್ಪದೊಂದಿಗೆ ಶ್ರೀಗಳ ಜೋಳಿಗೆಗೆ ತಮ್ಮ ಕೆಟ್ಟ ಚಟಗಳನ್ನು 'ಭಿಕ್ಷೆ'ಯಾಗಿ ಹಾಕುವಂತೆ ಕರೆ ನೀಡಲಾಯಿತು. ಪಾದಯಾತ್ರೆಯಲ್ಲಿ ಪಾಲ್ಗೊಂಡ ಅನೇಕ ಯುವಕರಿಂದ ದುಶ್ಚಟ ತ್ಯಜಿಸುವ ಕುರಿತು ಪ್ರತಿಜ್ಞೆ ಮಾಡಿಸಲಾಯಿತು.



ಪಾದಯಾತ್ರೆಯಲ್ಲಿ ಗ್ರಾಮದ ಹಿರಿಯರಾದ ಶ್ರೀಕಾಂತ್ ರಾಮದುರ್ಗ, ಕಲ್ಯಾಣಕುಮಾರ್ ಇಟ್ಟಿ, ಬಸಯ್ಯ ಕಡಕೋಳ, ಆನಂದ ಬೊಮ್ಮಣ್ಣವರ, ಸದಾಶಿವ ಮಡಿವಾಳರ, ಜಕ್ಕಪ್ಪ ಮೆಂಡಿಗೇರಿ, ಬಸವರಾಜ ಗದ್ಯಾಳ, ಹನುಮಂತ ಕೊಂಚನೂರ, ಚಿಕ್ಕಯ್ಯ ಪೂಜಾರಿ, ಶ್ರೀಕಾಂತ್ ನ್ಯಾಮಗೌಡ, ಸಿದ್ದು ಮಾಳಿ, ಮಲ್ಲಿಕಾರ್ಜುನ ರಾವಳೋಜಿ, ಶಿಕ್ಷಕರಾದ ಶಿವಾನಂದ ಕಲ್ಯಾಣಿ, ರವಿ ತಳ್ಳಿ ಸೇರಿದಂತೆ ಗ್ರಾಮಸ್ಥರು ಭಾಗವಹಿಸಿದ್ದರು.

**Printed by:** AVINASH BIDARI, **Published and owned by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR